ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೮೧**

**ಪಟ್ಟಿ – ೨೫**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಶುಕ್ರವಾರ, ದಿನಾಂಕ : ೨೫ನೇ ಜುಲೈ, ೨೦೧೪**

---

## ಸಮೂಹ – V

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

03292-1

## ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಹೊಸ ನಿವೃತ್ತಿ ವೇತನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೫೭೦ (೧೯೭೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರಿಗೆ ಹೊಸ ನಿವೃತ್ತಿ ವೇತನ (New Pension Scheme) ವನ್ನು ಜಾರಿಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಇದರ ಸಾಧಕ ಬಾಧಕಗಳೇನು (ವಿವರಿಸುವುದು) ;

(ಆ) ಸರ್ಕಾರವು ಜಾರಿಗೊಳಿಸಿದ ಈ ನೂತನ ಯೋಜನೆಯಲ್ಲಿ ಖಾಸಗಿ ಅನುದಾನಿತ ಶಾಲೆಗಳಲ್ಲಿ ಸೇವೆ ಸಲ್ಲಿಸುವ ಶಿಕ್ಷಕರಿಗೂ ಅನ್ವಯಿಸುತ್ತದೆಯೇ ; ಇಲ್ಲದಿದ್ದಲ್ಲಿ ಕಾರಣಗಳೇನು (ವಿವರಿಸುವುದು);

(ಇ) ಈ ಹೊಸ ನಿವೃತ್ತಿ ವೇತನವನ್ನು ಖಾಸಗಿ ಅನುದಾನಿತ ಶಾಲೆಗಳಿಗೆ ಒಳಪಡಿಸುವ ನಿಟ್ಟಿನಲ್ಲಿ ಸರ್ಕಾರದ ಮುಂದಿರುವ ಕ್ರಮಗಳೇನು (ಸಮಗ್ರ ಮಾಹಿತಿ ನೀಡುವುದು) ?

## ನೂತನ ಪದವಿ ಪೂರ್ವ ಕಾಲೇಜುಗಳ ಪ್ರಾರಂಭ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೫೭೧ (೧೯೭೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; ಕಳೆದ ಎರಡು ವರ್ಷಗಳಿಂದ ಹೊಸದಾಗಿ ಪ್ರಾರಂಭವಾಗಿರುವ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು) ;

(ಆ) ಸರ್ಕಾರದಿಂದ ಹೊಸದಾಗಿ ೨೦೧೩-೧೪ ಹಾಗೂ ೨೦೧೪-೧೫ನೇ ಸಾಲಿನಲ್ಲಿ ಮಂಜೂರಾದ ಮತ್ತು ಮೂಲವಾಗಿ ಇರುವ ಪದವಿ ಪೂರ್ವ ಕಾಲೇಜುಗಳಿಗೆ ಸಂಪೂರ್ಣ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು (ವಿವರಿಸುವುದು) ;

(ಇ) ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ (ಹಾಗಿದ್ದಲ್ಲಿ ಜಿಲ್ಲಾವಾರು ವಿವರ ನೀಡುವುದು) ?

## ರೈಲ್ವೆ ಅಭಿವೃದ್ಧಿ ಕಾಮಗಾರಿಗಳು

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :-**

೧೫೭೨ (೧೯೭೦) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್, ಗುಲ್ಬರ್ಗಾ, ಯಾದಗಿರ, ರಾಯಚೂರು, ಕೊಪ್ಪಳ, ಬಳ್ಳಾರಿ ಹಾಗೂ ದಾವಣಗೆರೆಯ ಹರಪನಹಳ್ಳಿಯಲ್ಲಿ ರೈಲ್ವೆ ಇಲಾಖೆ ಕೈಗೆತ್ತಿಕೊಂಡಿರುವ ಅಭಿವೃದ್ಧಿ ಕಾಮಗಾರಿಗಳಾವುವು (ಸಂಪೂರ್ಣ ವಿವರ ನೀಡುವುದು) ;

(ಆ) ಈ ಕಾಮಗಾರಿ ಅಂದಾಜು ವೆಚ್ಚವೆಷ್ಟು ; ಈಗಾಗಲೇ ಖರ್ಚಾಗಿರುವ ಹಣವೆಷ್ಟು ; ಅವುಗಳನ್ನು ಪೂರ್ಣಗೊಳಿಸುವುದಕ್ಕಾಗಿ ಬೇಕಾಗಿರುವ ಅನುದಾನ ಎಷ್ಟು (ಯೋಜನೆವಾರು ಮಾಹಿತಿ ಒದಗಿಸುವುದು) ;

(ಇ) ಈ ಯೋಜನೆಗಳ ಪೈಕಿ ಎಷ್ಟು ಯೋಜನೆಗಳಲ್ಲಿ ರಾಜ್ಯ ಸರ್ಕಾರದ ಪಾಲು ಎಷ್ಟು (ಯೋಜನಾವಾರು ಮಾಹಿತಿ ಒದಗಿಸುವುದು) ?

## ಖಾಸಗಿ ಅನುದಾನ ರಹಿತ ಶಾಲಾ ಶಿಕ್ಷಕರಿಗೆ ಕನಿಷ್ಠ ವೇತನ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೫೭೩ (೧೯೭೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ಖಾಸಗಿ ಅನುದಾನ ರಹಿತ ಶಾಲೆಗಳಲ್ಲಿ ಸೇವೆ ಸಲ್ಲಿಸುವ ಶಿಕ್ಷಕರಿಗೆ ಕನಿಷ್ಠ ವೇತನ ನೀಡುವಂತೆ ಸರ್ಕಾರವು ಆದೇಶ ಹೊರಡಿಸಿದೆಯೇ ; ಸರ್ಕಾರದ ಆದೇಶವನ್ನು ಎಷ್ಟು ಅನುದಾನ ರಹಿತ ಶಾಲೆಗಳು ಕಡ್ಡಾಯವಾಗಿ ಪಾಲಿಸುತ್ತಿವೆ (ವಿವರಿಸುವುದು) ;

(ಆ) ನೆರೆಯ ಮಹಾರಾಷ್ಟ್ರ ಸರ್ಕಾರವು ಅನುದಾನ ರಹಿತ ಶಾಲೆಗಳ ಶಿಕ್ಷಕರಿಗೆ ಕನಿಷ್ಠ ವೇತನ ನೀಡುತ್ತಿದ್ದು, ನಮ್ಮ ರಾಜ್ಯದಲ್ಲಿ ನೀಡದಿರಲು ಕಾರಣವೇನು ; ಅಂತಹ ಅನುದಾನ ರಹಿತ ಶಾಲೆಗಳ ಮೇಲೆ ಸರ್ಕಾರ ತೆಗೆದುಕೊಳ್ಳಲಾಗುವ ಕ್ರಮಗಳೇನು (ವಿವರಿಸುವುದು) ?

## ಸಮರ್ಪಕ ಬಸ್‌ಗಳ ಸಂಚಾರ.

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೫೭೪ (೨೦೨೮) ಮಾನ್ಯ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಜಿಲ್ಲೆಯ ಆಳಂದ ತಾಲ್ಲೂಕಿನ ಬಸ್ ಡಿಪೋಗೆ ಸರ್ಕಾರದಿಂದ ಎಷ್ಟು ಬಸ್‌ಗಳನ್ನು ನೀಡಲಾಗಿದೆ; ಸದರಿ ಪಟ್ಟಣದಿಂದ ಸುತ್ತಮುತ್ತಲಿನ ಪ್ರತಿ ಹಳ್ಳಿಗಳಿಗೆ ಎಷ್ಟು ಬಸ್‌ಗಳು

ಸಂಚರಿಸುತ್ತಿವೆ (ಸಮಯವಾರು, ಸಂಖ್ಯೆವಾರು ಮಾಹಿತಿ ನೀಡುವುದು) ;

(ಆ) ಕೆಲವೊಂದು ಹಳ್ಳಿಗಳಿಗೆ ಬಸ್ ಸಂಚಾರವಿಲ್ಲದೇ ಮತ್ತು ಸರಿಯಾದ ಸಮಯಕ್ಕೆ ಸಂಚರಿಸದೇ ಇರುವುದರಿಂದ ಜನಸಾಮಾನ್ಯರಿಗೆ ಹೆಚ್ಚಿನ ರೀತಿಯಲ್ಲಿ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಯಾವ ಕ್ರಮ ಕೈಗೊಳ್ಳುವುದು ?

## ಕಲಾವಿದರಿಗೆ ಮಾಸಾಶನ ನೀಡುವುದು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೫೭೫ (೧೯೭೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಎಷ್ಟು ಕಲಾವಿದರಿಗೆ ಸರ್ಕಾರದಿಂದ ಎಷ್ಟು ಮಾಸಾಶನ ಮಂಜೂರು ಮಾಡಲಾಗಿದೆ (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಆ) ಈ ಕಲಾವಿದರಿಗೆ ಪ್ರತಿ ತಿಂಗಳು ಎಷ್ಟು ಮಾಸಾಶನ ನೀಡಲಾಗುತ್ತಿದೆ ;

(ಇ) ಈಗ ನೀಡುತ್ತಿರುವ ಮಾಸಾಶನ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈಗಾಗಲೇ ಮಾಸಾಶನಕ್ಕಾಗಿ ಅರ್ಜಿ ಸಲ್ಲಿಸಿರುವ ಕಲಾವಿದರ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ?

## ಐತಿಹಾಸಿಕ ಕೋಟೆಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೫೭೬ (೧೯೭೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇರುವ ಐತಿಹಾಸಿಕ ಕೋಟೆಗಳೆಷ್ಟು (ಈ ಕೋಟೆಗಳ ಮಾಹಿತಿ ನೀಡುವುದು) ;

(ಆ) ಈ ಕೋಟೆಗಳ ಸಂರಕ್ಷಣೆಗಾಗಿ ರಾಜ್ಯ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಇವುಗಳನ್ನು ಅಭಿವೃದ್ಧಿ ಪಡಿಸಿ ಪ್ರವಾಸಿ ತಾಣವಾಗಿ ಪರಿವರ್ತಿಸಲು ರಾಜ್ಯ ಸರ್ಕಾರ ಯೋಜನೆ ಹಮ್ಮಿಕೊಂಡಿದೆಯೇ (ಸಮಗ್ರ ಮಾಹಿತಿ ನೀಡುವುದು) ?

## ಗ್ರಾಮಪಂಚಾಯತ್ ಕಾರ್ಯದರ್ಶಿಗಳು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೫೭೭ (೧೯೭೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯತ್‌ಗಳಲ್ಲಿ ಹೆಚ್ಚಿನ ಪ್ರಮಾಣದ ಕಾರ್ಯದರ್ಶಿಗಳ ಹುದ್ದೆ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಎರಡೂ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತ್‌ಗಳಿಗೆ ಮಂಜೂರಾದ ಹುದ್ದೆಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಇ) ಕಾರ್ಯದರ್ಶಿಗಳ ಹುದ್ದೆ ಖಾಲಿ ಉಳಿದಿರುವುದರಿಂದ ಪಂಚಾಯತ್ ಕೆಲಸ ಕಾರ್ಯಗಳಿಗೆ ಅಡ್ಡಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಖಾಲಿ ಇರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಸ್ತ್ರೀಶಕ್ತಿ ಯೋಜನೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೫೭೮ (೧೯೭೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸ್ತ್ರೀಶಕ್ತಿ ಯೋಜನೆ ಜಾರಿಗೆ ಬಂದಿರುವುದು ಯಾವಾಗ; ಈ ಯೋಜನೆಯ ಉದ್ದೇಶವೇನು ;

(ಆ) ಈ ಯೋಜನೆ ಅಡಿಯಲ್ಲಿ ರಾಜ್ಯದಲ್ಲಿ ಇದುವರೆಗೂ ಸ್ಥಾಪನೆಯಾಗಿರುವ ಸಂಘಗಳೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಇ) ಯಾದಗಿರಿ ಹಾಗೂ ಗುಲ್ಬರ್ಗಾ ಜಿಲ್ಲೆಯಲ್ಲಿರುವ ಸ್ತ್ರೀಶಕ್ತಿ ಸಂಘಗಳೆಷ್ಟು (ತಾಲ್ಲೂಕುವಾರು ಮಾಹಿತಿ ನೀಡುವುದು) ; ಈ ಎರಡೂ ಜಿಲ್ಲೆಗಳಲ್ಲಿ ಸಂಘಗಳು ಎಷ್ಟು ಹಣ ಉಳಿತಾಯ ಮಾಡಿರುತ್ತವೆ (ತಾಲ್ಲೂಕುವಾರು ಮಾಹಿತಿ ನೀಡುವುದು) ;

(ಈ) ಸ್ತ್ರೀಶಕ್ತಿ ಗುಂಪುಗಳಿಗೆ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡಲಾಗುತ್ತಿದೆಯೇ; ನೀಡಿದ್ದರೆ, ಎಷ್ಟು ಜನರಿಗೆ ತರಬೇತಿ ನೀಡಲಾಗಿದೆ (ವಿವರ ನೀಡುವುದು) ?

## ರಂಗಭೂಮಿ ಪಿತಾಮಹ ಶ್ರೀ ಗುಬ್ಬಿ ವೀರಣ್ಣನವರ ಸಮಾಧಿ ಅಭಿವೃದ್ಧಿ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೫೭೭ (೨೦೩೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಂಗಭೂಮಿ ಪಿತಾಮಹ ಪದ್ಮಶ್ರೀ ಶ್ರೀ ಗುಬ್ಬಿ ವೀರಣ್ಣನವರು ಮರಣ ಹೊಂದಿದ್ದು ಯಾವಾಗ ; ಎಲ್ಲಿ ;

(ಆ) ಮರಣಾನಂತರ ಅವರನ್ನು ಎಲ್ಲಿ ಸಮಾಧಿ ಮಾಡಲಾಗಿದೆ ; ಈ ಜಾಗವನ್ನು ಅಭಿವೃದ್ಧಿ ಮಾಡದಿರಲು ಕಾರಣವೇನು ;

(ಇ) ಗುಬ್ಬಿಯಲ್ಲಿ ನಿರ್ಮಾಣವಾಗುತ್ತಿರುವ ಗುಬ್ಬಿ ವೀರಣ್ಣ ಸ್ಮಾರಕ ಭವನದ ಕಾಮಗಾರಿ ಯಾವ ಹಂತದಲ್ಲಿದೆ ;

(ಈ) ಅನುದಾನವಿಲ್ಲದೆ ಕಾಮಗಾರಿ ಸ್ಥಗಿತಗೊಂಡಿದೆಯೇ ;

(ಉ) ಪ್ರಸಕ್ತ ವರ್ಷದಲ್ಲಿ ಹೆಚ್ಚಿನ ಅನುದಾನ ಬಿಡುಗಡೆ ಮಾಡಿ ಕಾಮಗಾರಿ ಪೂರ್ಣಗೊಳಿಸುವ ಕ್ರಮ ಕೈಗೊಳ್ಳಲಾಗುವುದೇ ?

03392-2

## ಕುಡಿಯುವ ನೀರಿನ ಸಮಸ್ಯೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೫೮೦ (೨೦೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುರುವೇಕೆರೆ ತಾಲ್ಲೂಕಿನ ಅನೇಕ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ಬಂದಿದ್ದಲ್ಲಿ, ಪಂಚಾಯತಿವಾರು ಮಾಹಿತಿ ನೀಡುವುದು) ;

(ಆ) ಆ ಗ್ರಾಮಗಳಿಗೆ ಹೊಸದಾಗಿ ಕೊಳವೆ ಬಾವಿ ತೋಡಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಇ) ತಾತ್ಕಾಲಿಕವಾಗಿ ಕುಡಿಯುವ ನೀರಿಗೆ ಏನು ವ್ಯವಸ್ಥೆ ಮಾಡಲಾಗಿದೆ ;

(ಈ) ಬರಗಾಲದಿಂದ ತತ್ತರಿಸಿದ ಅನೇಕ ಗ್ರಾಮಗಳಿಗೆ ನೀರಿನ ಸಮಸ್ಯೆ ಇದ್ದರೂ ಸ್ಪಂದಿಸದಿರಲು ಕಾರಣವೇನು ;

(ಉ) ಕೂಡಲೇ ಕ್ರಮ ಕೈಗೊಂಡು ಕುಡಿಯುವ ನೀರಿನ ವ್ಯವಸ್ಥೆ ಮಾಡಲಾಗುವುದೇ ?

## ಖ್ಯಾತ ಕಲಾವಿದರಾದ ಶ್ರೀ ಹೊನ್ನಪ್ಪ ಭಾಗವತರ್ ಶತಮಾನೋತ್ಸವ ಆಚರಣೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೧೫೮೧ (೨೦೩೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖ್ಯಾತ ಕಲಾವಿದರು, ನಾಟಕಕಾರರು, ಚಲನಚಿತ್ರ ನಟರೂ, ಆದ ಶ್ರೀಯುತ ಹೊನ್ನಪ್ಪ ಭಾಗವತರ್ ಹುಟ್ಟಿದ ದಿನಾಂಕ, ಮರಣ ಹೊಂದಿದ ದಿನಾಂಕ ಯಾವುದು ;

(ಆ) ಜೀವನದುದ್ದಕ್ಕೂ ರಂಗಕಲಾವಿದರಾಗಿ ದುಡಿದ ಇವರಿಗೆ ಯಾವ ಚಲನಚಿತ್ರಕ್ಕೆ ರಾಷ್ಟ್ರ ಪ್ರಶಸ್ತಿ (National Award) ಬಂದಿದೆ, ಯಾವಾಗ ;

(ಇ) ಇಂತಹ ಮಹಾನ್ ವ್ಯಕ್ತಿಗೆ ಸರ್ಕಾರ ನೀಡಿರುವ ಕೊಡುಗೆ ಏನು ;

(ಈ) ಒಂದು ನೂರು ವರ್ಷ ತುಂಬುವ ಜ್ಞಾಪಕಾರ್ತವಾಗಿ ಇವರ ಶತಮಾನೋತ್ಸವ ಕಾರ್ಯಕ್ರಮವನ್ನು ಸರ್ಕಾರ ಹಮ್ಮಿಕೊಳ್ಳುವುದೇ ; ಕೈಗೊಂಡಲ್ಲಿ ಯಾವಾಗ ;

(ಉ) ಶತಮಾನೋತ್ಸವ ಕಾರ್ಯಕ್ರಮಕ್ಕೆ ಸಿದ್ಧತೆಯನ್ನೇನಾದರೂ ನಡೆಸಲಾಗಿದೆಯೇ ?

## ಗ್ರಾಮೀಣ ಕೆರೆಗಳ ಅಭಿವೃದ್ಧಿ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೫೮೨ (೨೦೪೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿನಲ್ಲಿ ಎಷ್ಟು ಕೆರೆಗಳಿವೆ, ಯಾವುವು ; ಈ ಕೆರೆಗಳು ಗ್ರಾಮೀಣಾಭಿವೃದ್ಧಿ ಇಲಾಖೆ ವ್ಯಾಪ್ತಿಗೆ ಬರುತ್ತವೆಯೇ (ವಿವರ ನೀಡುವುದು) ;

(ಆ) ಕಳೆದ ಮೂರು ವರ್ಷಗಳಲ್ಲಿ ಯಾವ್ಯಾವ ಕೆರೆಗಳನ್ನು ಅಭಿವೃದ್ಧಿಪಡಿಸಲಾಗಿದೆ ;

(ಇ) ಈ ವರ್ಷದಲ್ಲಿ ತೆಗೆದುಕೊಂಡಿರುವ ಕೆರೆಗಳಾವುವು ; ಎಷ್ಟು ಅನುದಾನ ನೀಡಲಾಗಿದೆ ;

(ಈ) ಕೆರೆಗಳನ್ನು ಯಾವ ರೀತಿ ಅಭಿವೃದ್ಧಿಪಡಿಸಲಾಗಿದೆ ;

(ಉ) ಸರ್ಕಾರದ ಅನುದಾನದೊಂದಿಗೆ NREG ಯನ್ನು ಅಳವಡಿಸಿಕೊಂಡು ಮಾಡಲಾಗುವುದೇ ?

## ಹೊಳವನಹಳ್ಳಿ ಗ್ರಾಮ ಪಂಚಾಯತ್ ಸಿಬ್ಬಂದಿ ವರ್ಗ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :–**

೧೫೮೩ (೧೯೭೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ಕೊರಟಗೆರೆ ತಾಲ್ಲೂಕು, ಹೊಳವನಹಳ್ಳಿ ಗ್ರಾಮದ ಗ್ರಾಮ ಪಂಚಾಯತ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರ ಸಂಖ್ಯೆ ಎಷ್ಟು ;

(ಆ) ಸದರಿ ಪಂಚಾಯತ್‌ನಲ್ಲಿ ಕಾರ್ಯನಿರ್ವಹಿಸುವ ಪಿ.ಡಿ.ಓ. ಗ್ರಾಮ ಪಂಚಾಯತ್ ಕಾರ್ಯದರ್ಶಿ ಹಾಗೂ ಬಿಲ್ ಕಲೆಕ್ಟರ್, ಇತರೆ ಸಿಬ್ಬಂದಿಯವರು ಎಷ್ಟು ಮಂದಿ ಕಾರ್ಯನಿರ್ವಹಿಸುತ್ತಿದ್ದಾರೆ (ಹೆಸರು, ಹುದ್ದೆಗಳ ವಿವರ ತಿಳಿಸುವುದು) ;

(ಇ) ಸದರಿ ಪಂಚಾಯಿತಿಯಲ್ಲಿ ಇತ್ತೀಚಿನ ದಿನಗಳಲ್ಲಿ ಹಿಂದಿನ ಅಧಿಕಾರಿಯ ಬಗ್ಗೆ ದೂರನ್ನು ದಾಖಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸದರಿ ಅಧಿಕಾರಿಯ ಹೆಸರು ಹಾಗೂ ದೂರುಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು (ವಿವರ ಒದಗಿಸುವುದು) ?

## ಹಿರಿಯ ನಾಗರೀಕರಿಗೆ ಗುರುತು ಚೀಟಿ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೮೪ (೧೯೮೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಮಂದಿ ಹಿರಿಯ ನಾಗರೀಕರನ್ನು ಗುರುತಿಸಿ, ಗುರುತಿನ ಚೀಟಿ ನೀಡಲಾಗಿದೆ ;

(ಆ) ಹಿರಿಯ ನಾಗರೀಕರಿಗೆ ಸಿಗುವ ಸವಲತ್ತುಗಳ ಬಗ್ಗೆ ಅರಿವು ಮೂಡಿಸಲು ಏನಾದರೂ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆಯೇ; ಕೈಗೊಂಡಿದ್ದರೆ, ವಿವರ ನೀಡುವುದು ;

(ಇ) ಹಿರಿಯ ನಾಗರೀಕರಿಗೆ ತೊಂದರೆಗಳು ಉಂಟಾದಾಗ ಸಂಪರ್ಕಿಸಲು ಸಹಾಯವಾಣಿ ಕೇಂದ್ರಗಳನ್ನು ತೆರೆಯಲಾಗಿದೆಯೇ ;

(ಈ) ಹಿರಿಯ ನಾಗರೀಕರಿಗೆ ಕಾನೂನು ತಿಳುವಳಿಕೆ ನೀಡಲು ಸರ್ಕಾರ ಏನಾದರೂ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆಯೇ ;

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಮಂದಿ ಅಂಗವಿಕಲ ಚೇತನರಿದ್ದಾರೆ; ಅವರಿಗೆ ಸರ್ಕಾರದಿಂದ ಸ್ವಂತ ಉದ್ಯೋಗದಲ್ಲಿ ತೊಡಗಿಸಲು ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ (ಕೈಗೊಂಡ ಕಾರ್ಯಕ್ರಮಗಳ ವಿವರ ನೀಡುವುದು) ?

## ಅನುದಾನಿತ ಸರ್ಕಾರಿ ಪ್ರಾಥಮಿಕ ಶಾಲೆಗಳು

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೫೮೫ (೧೯೮೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳಿವೆ; ಇದರಲ್ಲಿ ಅನುದಾನಿತ ಶಾಲೆಗಳು ಎಷ್ಟು ;

(ಆ) ಈ ಶಾಲೆಗಳಲ್ಲಿ ಎಷ್ಟು ಶಿಕ್ಷಕರ ಹುದ್ದೆಗಳು ಖಾಲಿ ಇವೆ; ಶಿಕ್ಷಕೇತರ ಹುದ್ದೆಗಳು ಎಷ್ಟು ಖಾಲಿ ಇವೆ; ಇದ್ದರೆ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸದರಿ ಜಿಲ್ಲೆಗಳಲ್ಲಿ ಎಷ್ಟು ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಎಷ್ಟು ಶಿಕ್ಷಕರ ಹುದ್ದೆಗಳು ಖಾಲಿ ಇವೆ (ವಿವರ ನೀಡುವುದು) ;

(ಈ) ಈ ಜಿಲ್ಲೆಗಳ ಅನುದಾನಿತ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಸರ್ಕಾರಿ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಉ) ಪ್ರಾಥಮಿಕ ಶಾಲೆಗಳಲ್ಲಿ ನೈತಿಕ ಶಿಕ್ಷಣವನ್ನು ಬೋಧಿಸಲು ಸರ್ಕಾರ ಏನಾದರೂ ಕ್ರಮ ಕೈಗೊಂಡಿದೆಯೇ; ನೈತಿಕ ಬೋಧನೆಗೆ ಶಿಕ್ಷಕರನ್ನು ನೇಮಕ ಮಾಡಲು ಕ್ರಮ ಕೈಗೊಂಡಿದೆಯೇ ;

(ಊ) ನೈತಿಕ ಶಿಕ್ಷಣವನ್ನು ಕಡ್ಡಾಯ ಮಾಡಲು ಸರ್ಕಾರ ಶಾಲೆಗಳಿಗೆ ಆದೇಶವನ್ನು ನೀಡಲಾಗಿದೆಯೇ; ಹಾಗಿದ್ದಲ್ಲಿ, ಕ್ರಮ ಪಾಲಿಸದ ಶಾಲೆಗಳ ಮೇಲೆ ಕ್ರಮ ಜರುಗಿಸಲಾಗಿದೆಯೇ ?

## ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಅನುದಾನ ಬಿಡುಗಡೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೫೮೬ (೧೯೮೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಂಕಣಿ ಸಾಹಿತ್ಯ ಅಕಾಡೆಮಿಗೆ ೨೦೧೦ ರಿಂದ ೨೦೧೪ ರವರೆಗೆ ಎಷ್ಟು ಅನುದಾನವನ್ನು ಸರ್ಕಾರದಿಂದ ಬಿಡುಗಡೆ ಮಾಡಲಾಗಿದೆ ;

(ಆ) ಈ ಅಕಾಡೆಮಿಗೆ ಕೊಂಕಣಿ ಭಾಷೆ ತಿಳಿಯುವ ರಿಜಿಸ್ಟ್ರಾರ್‌ರನ್ನು ನೇಮಕ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ;

(ಇ) ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಸ್ವಂತ ಕಟ್ಟಡವನ್ನು ನಿರ್ಮಾಣ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಈ ಬಗ್ಗೆ ಚಿಂತನೆ ನಡೆಸಲಾಗಿದೆಯೇ ;

(ಈ) ಸದರಿ ಅಕಾಡೆಮಿಯ ಮೂಲಕ ಎಷ್ಟು ವಿದ್ಯಾರ್ಥಿಗಳಿಗೆ ಕೊಂಕಣಿ ಭಾಷೆಯನ್ನು ಶಾಲಾ ಕಾಲೇಜುಗಳಲ್ಲಿ ಐಚ್ಛಿಕ ವಿಷಯವಾಗಿ ಕಲಿಸುತ್ತಿದ್ದಾರೆ (ಈ ಬಗ್ಗೆ ವಿವರ ನೀಡುವುದು) ;

(ಉ) ಅಕಾಡೆಮಿಯಿಂದ ವಾರ್ಷಿಕ ಎಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ (೨೦೧೦ ರಿಂದ ವಿವರ ನೀಡುವುದು) ;

(ಊ) ಸಾಹಿತ್ಯ ಅಕಾಡೆಮಿಯ ಅಧ್ಯಕ್ಷರಿಗೆ ಮತ್ತು ಸದಸ್ಯರಿಗೆ ಮಾಸಿಕ ಸಂಭಾವನೆ ನೀಡಲಾಗುತ್ತಿದೆಯೇ (ಇದ್ದರೆ, ಎಷ್ಟು ಎಂಬ ವಿವರ ನೀಡುವುದು) ?

## ತುಳು ಭಾಷೆಗೆ ಸಂವಿಧಾನಾತ್ಮಕ ಮಾನ್ಯತೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೫೮೭ (೧೯೮೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಕೊಡಗು, ಶಿವಮೊಗ್ಗ ಮತ್ತು ಬೆಂಗಳೂರು ಮುಂತಾದ ಜಿಲ್ಲೆಗಳಲ್ಲಿ ಬಹು ಸಂಖ್ಯೆಯಲ್ಲಿರುವ ತುಳು ಭಾಷೆ ಮಾತನಾಡುವವರು ತುಳು ಭಾಷೆಯನ್ನು ಸಂವಿಧಾನದ ೮ನೇ ಪರಿಚ್ಛೇದದಲ್ಲಿ ಸೇರಿಸಬೇಕೆನ್ನುವ ಬೇಡಿಕೆ ರಾಜ್ಯ ಸರ್ಕಾರದ ಪರಿಶೀಲನೆಯಲ್ಲಿದೆಯೇ ; ಇದ್ದರೆ, ಯಾವ ಹಂತದಲ್ಲಿದೆ ;

(ಆ) ಪಂಚ ದ್ರಾವಿಡ ಭಾಷೆಗಳಲ್ಲಿ ಅತ್ಯಂತ ಪುರಾತನ ಭಾಷೆಗಳಲ್ಲಿ ಒಂದಾದ ಭಾಷೆ ತುಳು, ಲಿಪಿ, ಸಂಸ್ಕೃತಿ ಜೀವನ ಶೈಲಿ, ಕಲೆ, ಸಾಹಿತ್ಯವನ್ನು ಹೊಂದಿಕೊಂಡಿರುವ ಈ ಲಿಪಿಗೆ ಸಂವಿಧಾನಾತ್ಮಕ ಮಾನ್ಯತೆ ನೀಡಲು ಕೇಂದ್ರ ಸರ್ಕಾರದ ಜೊತೆ ಮಾತುಕತೆ ನಡೆಸಲಾಗಿದೆಯೇ ;

(ಇ) ರಾಜ್ಯದಲ್ಲಷ್ಟೇ ಅಲ್ಲದೆ ಪ್ರಪಂಚದಾದ್ಯಂತ ವಿಸ್ತರಿಸುತ್ತಿರುವ ತುಳು ಭಾಷಿಗರ ಸಂಖ್ಯೆ ಎಷ್ಟಿದೆ ಎಂಬುದು ಸರ್ಕಾರ ಗಮನಿಸಿದೆಯೇ ;

(ಈ) ತುಳು ಅಕಾಡೆಮಿಗೆ ಸ್ವಂತ ಕಟ್ಟಡವನ್ನು ಒದಗಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಉ) ತುಳು ಅಕಾಡೆಮಿಗೆ ಎಷ್ಟು ಅನುದಾನವನ್ನು ೨೦೧೦ ರಿಂದ ೨೦೧೪ರವರೆಗೆ ಬಿಡುಗಡೆ ಮಾಡಲಾಗಿದೆ ; ತುಳು ಅಕಾಡೆಮಿ ಕೈಗೊಂಡ ಕಾರ್ಯಕ್ರಮಗಳಾವುವು (ವಿವರ ನೀಡುವುದು) ?

## ಪಂಚಾಯತ್ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸುವುದು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೫೮೮.(೧೯೯೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ನೌಕರರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲು ಸಚಿವ ಸಂಪುಟ ನಿರ್ಣಯ ತೆಗೆದುಕೊಂಡಿರುವುದು ನಿಜವೇ ;

೦೩೩೭-೩

(ಆ) ಹಾಗಿದ್ದಲ್ಲಿ, ಸದರಿ ನೌಕರರಿಗೆ ಸರ್ಕಾರಿ ನೌಕರರಂತೆ ನಿವೃತ್ತಿ ಸೌಲಭ್ಯಗಳನ್ನು ನೀಡಲು ಇದುವರೆವಿಗೂ ಕ್ರಮ ಕೈಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸಚಿವ ಸಂಪುಟದ ನಿರ್ಣಯದಂತೆ ಸರ್ಕಾರ ಆದೇಶ ಹೊರಡಿಸದೇ ಇರುವುದಕ್ಕೆ ಕಾರಣಗಳೇನು (ವಿವರಗಳನ್ನು ನೀಡುವುದು) ?

## ಪುಸ್ತಕ ಆಯ್ಕೆ ಸಮಿತಿ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೫೮೯ (೧೯೯೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಲೋಕ ಶಿಕ್ಷಣ ನಿರ್ದೇಶನಾಲಯದ ವ್ಯಾಪ್ತಿಯಲ್ಲಿ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿ ಕಾರ್ಯ ನಿರ್ವಹಿಸುತ್ತಿದೆಯೇ ; ಕಳೆದ ೦೧.೦೨.೨೦೧೩ ರಿಂದ ೩೦.೦೬.೨೦೧೪ರವರೆಗೆ ಪ್ರಾಧಿಕಾರಿ ನಡೆಸಿರುವ ಸಭೆಗಳೆಷ್ಟು ;

(ಆ) ಕಳೆದ ಒಂದೂವರೆ ವರ್ಷದಿಂದ ನಡೆಸಿರುವ ಸಭೆಗಳಲ್ಲಿ ಕೈಗೊಂಡಿರುವ ತೀರ್ಮಾನಗಳೇನು; ಆಗಿರುವ ಪ್ರಗತಿ ಏನು ?

## ಅಂಗವಿಕಲರ ಅಧಿನಿಯಮದ ಆಯುಕ್ತರ ನೇಮಕ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೫೯೦ (೧೯೯೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಅಂಗವಿಕಲರ ಅಧಿನಿಯಮದ ಆಯುಕ್ತರನ್ನು ಯಾವಾಗ ನೇಮಕ ಮಾಡಲಾಯಿತು ;

(ಆ) ಈ ಆಯುಕ್ತರನ್ನು ನೇಮಿಸುವಾಗ ಸರ್ಕಾರ ಅನುಸರಿಸಿರುವ ಮಾನದಂಡಗಳೇನು ;

(ಇ) ಈ ಹುದ್ದೆಗೆ ನೇಮಿಸಲು ಸರ್ಕಾರ ವಿದ್ಯಾರ್ಹತೆಯನ್ನೇನಾದರೂ ನಿಗದಿಪಡಿಸಿದೆಯೇ ;

(ಈ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಆಯುಕ್ತರಿಗಿಂತ ಇನ್ನೂ ಹೆಚ್ಚಿನ ವಿದ್ಯಾಭ್ಯಾಸ ಮಾಡಿರುವ ಅಭ್ಯರ್ಥಿಗಳು ಇದ್ದರೂ ಸಹ ಈಗಿರುವವರನ್ನೇ ನೇಮಿಸಲು ಕಾರಣಗಳೇನು ;

(ಉ) ಕಡಿಮೆ ವಿದ್ಯಾರ್ಹತೆಯುಳ್ಳವರನ್ನು ಆಯುಕ್ತರನ್ನಾಗಿ ನೇಮಕ ಮಾಡಿರುವುದರಿಂದ ಹೆಚ್ಚಿನ ವಿದ್ಯಾಭ್ಯಾಸ ಹೊಂದಿರುವ ಅಭ್ಯರ್ಥಿಗಳಿಗೆ ವಂಚನೆ ಮಾಡಿದಂತಾಗುವುದಿಲ್ಲವೇ ;

(ಊ) ಹಾಗಿದ್ದಲ್ಲಿ, ಹೆಚ್ಚಿನ ವಿದ್ಯಾಭ್ಯಾಸ ಹೊಂದಿರುವ ಅಭ್ಯರ್ಥಿಗಳನ್ನು ಆಯುಕ್ತರನ್ನಾಗಿ ನೇಮಿಸಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಋ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಆಯುಕ್ತರು ಭ್ರಷ್ಟಾಚಾರದಲ್ಲಿ ನಿರತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಾಕ್ಷರತಾ ಮಿಷನ್ ಪ್ರಾಧಿಕಾರ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೫೯೧ (೧೯೬೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಸಾಕ್ಷರತಾ ಮಿಷನ್ ಪ್ರಾಧಿಕಾರ ಅಸ್ತಿತ್ವಕ್ಕೆ ಬಂದಿದ್ದು ಯಾವಾಗ; ಪ್ರಾಧಿಕಾರದ ಕಾರ್ಯವೇನು ;

(ಆ) ಈ ಪ್ರಾಧಿಕಾರದ ವತಿಯಿಂದ ದಿನಾಂಕ:೦೧.೦೩.೨೦೧೩ ರಿಂದ ೩೦.೦೬.೨೦೧೪ರವರೆಗೆ ಹಮ್ಮಿಕೊಳ್ಳಲಾದ ಕಾರ್ಯಕ್ರಮಗಳೇನು; ಈ ಕಾರ್ಯಕ್ರಮಗಳಿಗೆ ವೆಚ್ಚ ಮಾಡಿರುವ ಹಣ ಎಷ್ಟು; ಯಾವ ಯಾವ ಉದ್ದೇಶಕ್ಕೆ ಎಷ್ಟು ಹಣ ವೆಚ್ಚ ಮಾಡಲಾಗಿದೆ (ಕಾರ್ಯಕ್ರಮವಾರು ವೆಚ್ಚವಾರು ಹಣದ ವಿವರ ನೀಡುವುದು) ;

(ಇ) ಪ್ರಾಧಿಕಾರ ಹಮ್ಮಿಕೊಂಡಿದ್ದ ಕಾರ್ಯಕ್ರಮಗಳು ಯಶಸ್ವಿಯಾಗಿವೆಯೇ; ಇಲ್ಲದೇ ಇದ್ದಲ್ಲಿ ಕಾರಣವೇನು ; ಕಾರ್ಯಕ್ರಮಗಳು ಯಶಸ್ವಿಯಾಗದಿದ್ದಲ್ಲಿ ಯಾರನ್ನು ಹೊಣೆಗಾರರನ್ನಾಗಿಸಲಾಗುವುದು ?

## ಹೋಟೆಲ್ ಮಯೂರ್ ಭರಿದ್ ಶಾಹಿಯ ಆಸ್ತಿ.

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೫೨ (೧೯೬೫) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ನಗರದಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧೀನದಲ್ಲಿ ಹೋಟೆಲ್ ಮಯೂರ್ ಭರಿದ್ ಶಾಹಿ ಎಂಬ ಹೆಸರಿನಲ್ಲಿ ಹೋಟೆಲ್ ಇದೆಯೇ ;

(ಆ) ಈ ಹೋಟೆಲ್ ಮತ್ತು ವಸತಿ ಗೃಹ ಸ್ವತ: ನಿಗಮದಿಂದ ನಡೆಸಲಾಗುತ್ತಿದೆಯೇ; ಅಥವಾ ಗುತ್ತಿಗೆ ನೀಡಲಾಗಿದೆಯೇ; ಗುತ್ತಿಗೆ ನೀಡಿದ್ದಲ್ಲಿ, ಎಷ್ಟು ವರ್ಷಕ್ಕೆ ಹಾಗೂ ಎಷ್ಟು ಬಾಡಿಗೆಗೆ ಒಪ್ಪಂದ ಮಾಡಿಕೊಳ್ಳಲಾಗಿದೆ; ಆ ಗುತ್ತಿಗೆದಾರರ ಹೆಸರು ಗುತ್ತಿಗೆ ನೀಡಲಾದ ದಿನಾಂಕ, ಒಪ್ಪಂದ ಕರಾರಿನ ಪತ್ರದೊಂದಿಗೆ ಮಾಹಿತಿ ನೀಡುವುದು ;

(ಇ) ಇದರ ಪಕ್ಕದಲ್ಲಿ ಗುತ್ತಿಗೆದಾರರು ಕಾನೂನು ಬಾಹಿರವಾಗಿ ಒಂದು ಕಲ್ಯಾಣ ಮಂಟಪ ಮತ್ತು ಅಂಗಡಿಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಲ್ಲಿ, ಇವರ ವಿರುದ್ಧ ಕಾನೂನು ರೀತ್ಯಾ ಸೂಕ್ತ ಕ್ರಮ ಕೈಗೊಳ್ಳಲಾಗಿದೆಯೇ (ವಿವರ ಒದಗಿಸುವುದು) ;

(ಈ) ಬೀದರ್‌ನಲ್ಲಿರುವ ಸದರಿ ನಿಗಮದ ಒಟ್ಟು ಆಸ್ತಿಯ ವಿಸ್ತೀರ್ಣ ಎಷ್ಟು ; ಹಾಗೂ ಅಲ್ಲಿ ಯಾವ ಯಾವ ಉದ್ದೇಶಕ್ಕಾಗಿ ಬಳಕೆ

ಮಾಡಿಕೊಳ್ಳಲಾಗಿದೆ; ಮತ್ತು ಆಸ್ತಿಯ ಸರ್ವೆ ನಂಬರ್ ಯಾವುದು (ಮಾಹಿತಿ ನೀಡುವುದು) ?

## ಪ್ರಸ್ತುತ ಪ್ರಸಾರದಲ್ಲಿರುವ ಪತ್ರಿಕಾ ಹಾಗೂ ಟಿ.ವಿ. ಮಾಧ್ಯಮಗಳ ವಿವರ

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೫೩ (೧೯೯೭)ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಸ್ತುತ ಪ್ರಸಾರದಲ್ಲಿರುವ ಪತ್ರಿಕಾ ಹಾಗೂ ಟಿ.ವಿ. ಮಾಧ್ಯಮಗಳ ವಿವರಗಳನ್ನು ಒದಗಿಸುವುದು; ಸದರಿ ಮುದ್ರಣ ಹಾಗೂ ದೃಶ್ಯ ಮಾಧ್ಯಮಗಳು ಪ್ರಾರಂಭಗೊಂಡಿದ್ದು ಯಾವಾಗಿನಿಂದ; ಪತ್ರಿಕಾವಾರು, ವಾಹಿನಿಗಳವಾರು ಪ್ರಾರಂಭಿಕ ವರ್ಷವಾರು ವಿವರಗಳನ್ನು ಒದಗಿಸುವುದು ;

(ಆ) ಈ ಪೈಕಿ ಮುದ್ರಣ ಮಾಧ್ಯಮದ ವ್ಯಾಪ್ತಿಯಿಂದ ಮುದ್ರಣಗೊಂಡು ಪ್ರಸಾರವಾಗುತ್ತಿರುವ ಪತ್ರಿಕೆಗಳು ಯಾವುವು; ದಿನಪತ್ರಿಕೆ, ವಾರಪತ್ರಿಕೆ, ೧೫ ದಿನ ಅವಧಿಯ ಮಾಸಿಕ ಪತ್ರಿಕೆ, ತ್ರೈಮಾಸಿಕವಾರು ಪ್ರಾರಂಭಗೊಂಡ ವರ್ಷವಾರು ಪ್ರಸಾರ ವ್ಯಾಪ್ತಿವಾರು ಅವುಗಳ ಮುದ್ರಣ ಪ್ರಸಾರದ ಸಂಖ್ಯೆವಾರು ಪೂರ್ಣ ವಿವರ ನೀಡುವುದು ;

(ಇ) ರಾಜ್ಯದಲ್ಲಿ ಹಾಲಿ ಅತೀ ಹೆಚ್ಚಿನ ಮುದ್ರಣ ಪ್ರಸಾರವಿರುವ ದಿನಪತ್ರಿಕೆ ಯಾವುದು; ಪ್ರಸಾರ ಸಂಖ್ಯೆ, ವ್ಯಾಪ್ತಿ-ವಿಸ್ತೀರ್ಣಗಳನ್ನು ಎಡಿಷನ್‌ಗಳವಾರು ವಿವರ ಒದಗಿಸುವುದು ;

(ಈ) ಪತ್ರಿಕೆ ಪ್ರಾರಂಭಕ್ಕೆ ಅನುಮತಿ ಪಡೆದು ಪ್ರಸಾರ ಮುದ್ರಣ ಮಾಡದಿರುವ ಪತ್ರಿಕೆಗಳ ಸಂಖ್ಯೆ ಎಷ್ಟು; ಹಾಲಿ ಚಾಲ್ತಿಯಲ್ಲಿರುವ ರಾಜ್ಯಮಟ್ಟದ ದಿನಪತ್ರಿಕೆಗಳ ವಿವರ ಹಾಗೂ ರದ್ದಾಗಿರುವ ವರ್ಗಾವಣೆಗೊಂಡಿರುವ, ಮಾರಾಟವಾಗಿರುವ ಪತ್ರಿಕೆಗಳು ಯಾವುವು ;

(ಉ) ಇವುಗಳಿಗೆ ರಾಜ್ಯ ಸರ್ಕಾರ ವಾರ್ತಾ ಇಲಾಖೆಯಿಂದ ನೀಡಿರುವ ಜಾಹೀರಾತಿನ ಕಳೆದ ೧ ವರ್ಷದ ಮೊತ್ತವೆಷ್ಟು (ಪತ್ರಿಕಾವಾರು ಪೂರ್ಣ ವಿವರ ನೀಡುವುದು) ?

## ಸಾರಾಯಿ ಮಾರಾಟದಿಂದ ಸರ್ಕಾರಕ್ಕೆ ಬಂದ ರಾಜಸ್ವ

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೯೪ (೧೯೯೪) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಪರವಾನಗಿ ಹೊಂದಿರುವ ಸಾರಾಯಿ ಅಂಗಡಿಗಳು ಎಷ್ಟು ಮತ್ತು ಸದರಿ ಅಂಗಡಿಗಳಿಗೆ ಪ್ರತಿ ತಿಂಗಳು ಎಷ್ಟು ಪ್ರಮಾಣದ ಸಾರಾಯಿ ಮಾರಾಟ ಮಾಡಲು ಅನುಮತಿ ನೀಡಲಾಗಿದೆ ;

(ಆ) ಹಾಗಿದ್ದಲ್ಲಿ, ೨೦೧೧ ರಿಂದ ೨೦೧೪ರ ಜೂನ್ ತಿಂಗಳವರೆಗೆ ಸಾರಾಯಿ ಮಾರಾಟದಿಂದ ಸರ್ಕಾರಕ್ಕೆ ಸಲ್ಲಿಸಿದ ರಾಜಸ್ವದ ವಿವರಗಳ (ವರ್ಷವಾರು) ಮಾಹಿತಿ ನೀಡುವುದು ;

(ಇ) ಜಿಲ್ಲೆಯ ಪ್ರತಿಯೊಂದು ತಾಲ್ಲೂಕಿನಲ್ಲಿ ಕಾನೂನು ಬಾಹಿರವಾಗಿ ಸಾರಾಯಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಏನು ಕ್ರಮ ತೆಗೆದುಕೊಳ್ಳಲಾಗಿದೆ; ಆ ಬಾರ್‌ಗಳ ಹೆಸರು ವಿಳಾಸದ ಮಾಹಿತಿ ನೀಡುವುದು ;

(ಉ) ಜಿಲ್ಲೆಯಲ್ಲಿ ಎಷ್ಟು ಬಾರ್ ಅಂಡ್ ರೆಸ್ಟೋರೆಂಟ್‌ಗಳಿವೆ; ಅವುಗಳು ಎಲ್ಲೆಲ್ಲಿವೆ (ಸಂಪೂರ್ಣ ಮಾಹಿತಿ ನೀಡುವುದು) ?

**ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಜಾತಿಯವರಿಗೆ ಮನೆ ವಿತರಣೆ**

**ಶ್ರೀ ರಘುನಾಥ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೫೯೫ (೧೯೯೬) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಕರ್ನಾಟಕ ಗೃಹ ನಿರ್ಮಾಣ ಮಂಡಳಿಯ ವತಿಯಿಂದ ಬೀದರ್ ತಾಲ್ಲೂಕಿನ ಜೆಟ್ಟ/ಗೋನ್ನಳಿ ಗ್ರಾಮದ ಹತ್ತಿರ ನಿರ್ಮಾಣದ HIG/MIG/LIG/EWS ಮನೆ ಮತ್ತು ನಿವೇಶನಗಳು ಎಷ್ಟು ;

(ಆ) ನಿರ್ಮಾಣವಾದ ಮನೆ/ನಿವೇಶನಗಳು ವಿತರಣೆ ಆಗಿರುವುದೆಷ್ಟು; ಹಾಗೂ ಖಾಲಿ ಇರುವುದೆಷ್ಟು ; ಹಾಗೂ ಖಾಲಿ ಮನೆ/ನಿವೇಶನಗಳ ಸಂಖ್ಯೆ ಹಾಗೂ ವಿಸ್ತೀರ್ಣಗಳವಾರು ಮಾಹಿತಿ ನೀಡುವುದು ;

(ಇ) ಕಾಯಿದೆಯ ಪ್ರಕಾರ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಎಷ್ಟು ಮನೆಗಳು/ನಿವೇಶನಗಳು ನೀಡಲಾಗಿದೆ; ಯೋಜನೆ ಪ್ರಾರಂಭ ಆದಾಗಿನಿಂದ ಮಾಹಿತಿ ನೀಡುವುದು; ಹಾಗೂ ಈ ಜನಾಂಗಕ್ಕೆ ಕೊಡಬೇಕಾದ ಮನೆ/ನಿವೇಶನಗಳು ಬಾಕಿ ಇರುವುದು ಎಷ್ಟು (ವರ್ಷವಾರು ಮಾಹಿತಿ ನೀಡುವುದು) ?

## ಪದವಿ ಪೂರ್ವ ಖಾಸಗಿ ಅಭ್ಯರ್ಥಿಗಳ ಶುಲ್ಕ

**ಶ್ರೀ ಗೋ. ಮಧುಸೂದನ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :-**

೧೫೪೬ (೨೦೦೦) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಸಗಿ ಅಭ್ಯರ್ಥಿಗಳಿಗೆ ಪರೀಕ್ಷಾ ಕೇಂದ್ರ ಹೊಂದಲು ಸಿ.ಬಿ.ಸಿ.ಗೆ ಪ್ರತಿ ಅಭ್ಯರ್ಥಿಯಿಂದ ಎಷ್ಟು ಶುಲ್ಕ ಸಂದಾಯವಾಗುತ್ತಿದೆ ;

(ಆ) ಈ ರೀತಿ ಸಂಗ್ರಹವಾಗಿರುವ ಶುಲ್ಕದ ಮೊತ್ತ, ಜಿಲ್ಲಾವಾರು, ಕಾಲೇಜುವಾರು ನೀಡುವುದು ;

(ಇ) ಈ ಮೊತ್ತವನ್ನು ಸದರಿ ಕಾಲೇಜುಗಳ ಪ್ರಯೋಗಾಲಯ, ಶೌಚಾಲಯ, ಪೀಠೋಪಕರಣಗಳಿಗೆ ಖರ್ಚು ಮಾಡಲು ಸದರಿ ಕಾಲೇಜುಗಳ ಪ್ರಾಂಶುಪಾಲರಿಗೆ ಅಧಿಕಾರ ನೀಡಲಾಗಿದೆಯೇ ?

## ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಜೆ.ಓ.ಸಿ. ನೌಕರರ ಸ್ಥಳ ನಿಯುಕ್ತಿ

**ಶ್ರೀ ಗೋ. ಮಧುಸೂದನ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :-**

೧೫೯೭ (೨೦೦೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಖಾಸಗಿ ಪದವಿ ಪೂರ್ವ ಕಾಲೇಜುಗಳಲ್ಲಿ ಜೆ.ಓ.ಸಿ ನೌಕರರು ಸೇವೆ ಸಲ್ಲಿಸುತ್ತಿದ್ದು, ಅವರ ಸೇವೆಯನ್ನು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಅನುದಾನಿತ ಖಾಲಿ ಹುದ್ದೆಗಳಲ್ಲಿ ವಿಲೀನಗೊಳಿಸುವ ಪ್ರಕ್ರಿಯೆ ಜಾರಿಯಲ್ಲಿದ್ದು, ಇಲ್ಲಿಯವರೆಗೆ ಎಷ್ಟು ಉಪನ್ಯಾಸಕರಿಗೆ ಮತ್ತು ಬೋಧಕೇತರ ಹುದ್ದೆಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ; (ಪ್ರತಿ ಅಭ್ಯರ್ಥಿಯ ಹೆಸರು, ಸ್ಥಳ, ನಿಯುಕ್ತಿಗೊಳಿಸಲಾದ ಅನುದಾನಿತ ಸಂಸ್ಥೆ, ಪದನಾಮ ಮುಂತಾದ ವಿವರಗಳೊಂದಿಗೆ)

(ಆ) ಈ ರೀತಿ ಖಾಸಗಿ ಅನುದಾನಿತ ಸಂಸ್ಥೆಗಳವಾರು ಇಲಾಖೆಯಿಂದ ನಿಯುಕ್ತಿ ಆದೇಶ ಪಡೆದ ನಂತರ, ಸದರಿ ಅಭ್ಯರ್ಥಿಗಳಿಗೆ ತಮ್ಮ ಸಂಸ್ಥೆಗಳಲ್ಲಿ ಪ್ರವೇಶ ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇಂತಹವುಗಳ ಬಗ್ಗೆ ಪ್ರಕರಣವಾರು ವಿವರ ನೀಡುವುದು (ಸ್ಥಳ ನಿಯುಕ್ತಿ ಪಡೆದ ಅಭ್ಯರ್ಥಿ ಮತ್ತು ಅವಕಾಶ ನಿರಾಕರಿಸಲ್ಪಟ್ಟ ಅಭ್ಯರ್ಥಿ) ;

(ಇ) ಈ ರೀತಿ ಅವಕಾಶ ನಿರಾಕರಿಸಲ್ಪಟ್ಟವರ ಬಗ್ಗೆ ಸರ್ಕಾರ ಯಾವ ಪುನರ್ ವ್ಯವಸ್ಥೆ ಯೋಜನೆಯನ್ನು ತೀರ್ಮಾನಿಸಿದೆ; ಅಂತಹ

ಶಿಕ್ಷಣ ಸಂಸ್ಥೆಗಳ ವಿರುದ್ಧ ಯಾವ ಕ್ರಮ ಕೈಗೊಂಡಿದೆ (ಪ್ರಕರಣವಾರು ವಿವರ ನೀಡುವುದು) ?

## ಮೈಸೂರಿನ ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜನ್ನು, ಸಂಸ್ಕೃತ ವಿವಿಯ ವ್ಯಾಪ್ತಿಗೆ ತರುವುದು

**ಶ್ರೀ ಗೋ. ಮಧುಸೂದನ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) :-**

೧೫೯೮ (೨೦೦೧) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರಿನ ಸರ್ಕಾರಿ ಮಹಾರಾಜ ಸಂಸ್ಕೃತ ಕಾಲೇಜನ್ನು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ತರಲಾಗಿದೆಯೇ ; ಸದರಿ ಕಾಲೇಜಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ಸಂಸ್ಕೃತ ವಿಶ್ವವಿದ್ಯಾನಿಲಯದಲ್ಲಿ ವಿಲೀನಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಯಾವ ನೌಕರರನ್ನು ಯಾವ ಹುದ್ದೆಯಲ್ಲಿ ವಿಲೀನಗೊಳಿಸಲಾಗಿದೆ (ಪದನಾಮ, ವಿಲೀನಗೊಳಿಸಿದ ದಿನಾಂಕ, ಆದೇಶ ಮುಂತಾದ ವಿವರ ನೀಡುವುದು) ;

(ಆ) ರಾಜ್ಯದಲ್ಲಿನ ಸಂಸ್ಕೃತ ಕಾಲೇಜುಗಳ ಬೋಧಕ ನೌಕರರಿಗೆ ಯು.ಜಿಸಿ. ನಿಯಮಾವಳಿಗಳನ್ನು ಅಳವಡಿಸಲಾಗಿದೆಯೇ ; ಇಲ್ಲವಾದಲ್ಲಿ, ಪದವಿ ಮತ್ತು ಸ್ನಾತಕೋತ್ತರ ಪದವಿಗಳ ಗುಣಮಟ್ಟವು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಬಗ್ಗೆ ಯಾವ ಕ್ರಮವಹಿಸಲು ಸರ್ಕಾರ ಯೋಜಿಸಿದೆ ;

(ಇ) ಕಾಲಕಾಲಕ್ಕೆ ಸಂಸ್ಕೃತ ಕಾಲೇಜುಗಳನ್ನು ಉನ್ನತೀಕರಿಸದಿರುವುದನ್ನು ಸರ್ಕಾರ ಗಮನಿಸಿದೆಯೇ ; ಇಂತಹ ಕಾಲೇಜುಗಳನ್ನು ಉನ್ನತೀಕರಿಸಿ, ಉಳಿದ ಪದವಿ ಮತ್ತು ಸ್ನಾತಕೋತ್ತರ ಪದವಿ ಶಿಕ್ಷಣದಂತೆ ಯು.ಜಿ.ಸಿ. ನಿಯಮದಡಿಯಲ್ಲಿ ವ್ಯವಸ್ಥಾಪನೆಗೊಳಿಸಲು ಸರ್ಕಾರ ಯೋಚಿಸಿದೆಯೇ ?

## ಸರ್ಕಾರಿ ಪದವಿ ಮಹಾವಿದ್ಯಾಲಯ ಪ್ರಾರಂಭಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೫೯೯ (೨೦೦೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕಿನ ಮುರಗೋಡ ಪಟ್ಟಣದಲ್ಲಿ ಸರ್ಕಾರಿ ಪದವಿ ಮಹಾವಿದ್ಯಾಲಯ ಪ್ರಾರಂಭಿಸಲು ಮನವಿಗಳು ಬಂದಿವೆಯೇ ;

(ಆ) ಈ ಪಟ್ಟಣದ ಸುತ್ತ-ಮುತ್ತಲು ಸರ್ಕಾರಿ ಪ್ರೌಢಶಾಲೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜು ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮುರಗೋಡ ಪಟ್ಟಣದಲ್ಲಿ ಪೋಲೀಸ್ ಠಾಣೆ, ಸಬ್ ರಿಜಿಸ್ಟರ ಕಛೇರಿ, ಪ್ರಾಥಮಿಕ ಆರೋಗ್ಯ ಕೇಂದ್ರ ಶ್ರೀ ಮಹಾಂತ ಶಿವಯೋಗಿಗಳ ದುರದುಂಡೇಶ್ವರಮಠ, ಸರ್ಕಾರಿ ಐ.ಟಿ.ಐ. ಕಾಲೇಜ್ ಹೀಗೆ ಎಲ್ಲಾ ಸೌಕರ್ಯ ಹೊಂದಿದ ಪಟ್ಟಣವೆಂಬ ಸಂಗತಿ ಸರ್ಕಾರಕ್ಕೆ ತಿಳಿದಿರುವುದೇ ;

(ಈ) ಈ ಪಟ್ಟಣದಲ್ಲಿ ಕಾಲೇಜು ಪ್ರಾರಂಭಿಸಲು ಎಲ್ಲ ಮೂಲಭೂತ ಸೌಕರ್ಯ ಹೊಂದಿದ್ದು, ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಗೆ ಇದ್ದು, ಹಾಗೂ ಇಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರು ಹೆಚ್ಚಿಗೆ ಇದ್ದು, ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಹೆಣ್ಣು ಮಕ್ಕಳ ಅನುಕೂಲತೆಗಾಗಿ ಇಲ್ಲಿ ಸರ್ಕಾರಿ ಪದವಿ ಮಹಾವಿದ್ಯಾಲಯವನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಪ್ರವಾಸಿ ಕೇಂದ್ರವಾದ ಎಂ. ಚಂದರಗಿ ಪಟ್ಟಣದಲ್ಲಿ ಯಾತ್ರಿನಿವಾಸ ನಿರ್ಮಾಣ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೬೦೦ (೨೦೦೫) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ, ರಾಮದುರ್ಗ ತಾಲ್ಲೂಕಿನ ಪ್ರವಾಸಿ ಕೇಂದ್ರವಾದ ಎಂ. ಚಂದರಗಿ ನಗರದಲ್ಲಿ ಯಾತ್ರಿನಿವಾಸ ಕಟ್ಟಲು ಮನವಿಗಳು ಬಂದಿದೆಯೇ ;

(ಆ) ಈ ಪಟ್ಟಣದಲ್ಲಿ ೧೦೧ ಜ್ಯೋತಿರ್ಲಿಂಗಗಳು ಇದ್ದು, ಪ್ರವಾಸಿಗರು ಜ್ಯೋತಿರ್ಲಿಂಗ ನೋಡಿ ಹಾಗೂ ಶ್ರೀ ಗುರು ವೀರಭದ್ರೇಶ್ವರ ದರ್ಶನ ಪಡೆದು ಇಲ್ಲಿ ವಿಶ್ರಮಿಸಿ ಮುಂದೆ ಪ್ರೇಕ್ಷಣಿಯ ಸ್ಥಳಗಳಾದ ಶ್ರೀ ಕ್ಷೇತ್ರ ಗೊಡಚಿ, ಬಾದಾಮಿ, ಪಟ್ಟದಕಲ್ಲು, ಐಹೊಳೆ ಮುಂತಾದ ಸ್ಥಳಗಳಿಗೆ ಹೋಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಸ್ಥಳಕ್ಕೆ ಬರುವ ಪ್ರವಾಸಿಗರಿಗೆ ತಂಗಲು ಹಾಗೂ ಅದರೊಂದಿಗೆ ಮೂಲ ಸೌಕರ್ಯಗಳಾದ ಶುದ್ಧ ಕುಡಿಯುವ ನೀರು, ಮೂತ್ರಾಲಯ, ಶೌಚಾಲಯ ಹಾಗೂ ಯಾತ್ರಿನಿವಾಸ ಅವಶ್ಯಕತೆ ಇದ್ದು, ಅದನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಸರ್ಕಾರಿ ಪ್ರೌಢಶಾಲೆಯನ್ನು ಪ್ರಾರಂಭಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೬೦೧ (೨೦೦೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕಿನ ಮಾಟೊಳ್ಳಿ ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆ ಪ್ರಾರಂಭಿಸಲು ಮನವಿಗಳು ಬಂದಿವೆಯೇ ;

(ಆ) ಈ ಗ್ರಾಮವು ಮಲಪ್ರಭಾ ಮುಳುಗಡೆ ಗ್ರಾಮವಾಗಿದ್ದು, ಇಲ್ಲಿ ಸರ್ಕಾರಿ ಪ್ರೌಢಶಾಲೆಯನ್ನು ಪ್ರಾರಂಭಿಸಲು ಜಾಗವನ್ನು ಸರ್ಕಾರ ಕಾಯ್ದಿರಿಸಿದ್ದು, ಈ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗುವುದೇ ;

(ಇ) ಇಲ್ಲಿ ಶಾಲೆ ಪ್ರಾರಂಭಿಸಲು ಎಲ್ಲಾ ಮೂಲಭೂತ ಸೌಕರ್ಯ ಹೊಂದಿರುವುದರಿಂದ ವಿಶೇಷವಾಗಿ ಮುಳುಗಡೆ ಪ್ರದೇಶದ ಹೆಣ್ಣು ಮಕ್ಕಳಿಗೆ ತೊಂದರೆಯಾಗುತ್ತಿದ್ದು ಹಾಗೂ ಇಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರು ಹೆಚ್ಚಾಗಿ ವಾಸಿಸುತ್ತಿದ್ದು, ಅವರ ಮಕ್ಕಳಿಗೆ ತೊಂದರೆಯಾಗಬಾರದೆಂಬ ಉದ್ದೇಶದಿಂದ ಇಲ್ಲಿ ಆದ್ಯತೆ ಮೇರೆಗೆ ಸರ್ಕಾರಿ ಪ್ರೌಢಶಾಲೆ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯ ಪ್ರಾರಂಭಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :-**

೧೬೦೨ (೨೦೦೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯ ಪ್ರಾರಂಭಿಸಲು ಮನವಿಗಳು ಬಂದಿವೆಯೇ ;

(ಆ) ಈ ಗ್ರಾಮದಲ್ಲಿ ಪದವಿ ಪೂರ್ವ ಕಾಲೇಜು ಪ್ರಾರಂಭಿಸಲು ಎಲ್ಲಾ ಮೂಲಭೂತ ಸೌಕರ್ಯಗಳು ಇದ್ದು, ವಿದ್ಯಾರ್ಥಿಗಳ ಸಂಖ್ಯೆ ಇದ್ದು, ಇಲ್ಲಿ ಮಲಪ್ರಭಾ ಮುಳುಗಡೆ ಪ್ರದೇಶದ ಜನರು ವಲಸೆಯಾಗಿದ್ದು, ವಿಶೇಷವಾಗಿ ಹೆಣ್ಣು ಮಕ್ಕಳಿಗೆ ತೊಂದರೆಯಾಗುತ್ತಿದ್ದು, ಹಾಗೂ ಇಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನರು ವಲಸೆಯಾಗಿರುವುದರಿಂದ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಇಲ್ಲಿ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಮಹಾವಿದ್ಯಾಲಯ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಹೆಚ್ಚಾಗುತ್ತಿರುವ ಇಂಜಿನಿಯರಿಂಗ್ ಕಾಲೇಜುಗಳಿಗೆ ಸಂಬಂಧಿಸಿದಂತೆ

**ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ) :-**

೧೬೦೩ (೨೦೧೦) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಲ್ಲೆಂದರಲ್ಲಿ ನಾಯಿಕೊಡೆಗಳಂತೆ ತಲೆಎತ್ತುತ್ತಿರುವ ಇಂಜಿನಿಯರಿಂಗ್ ಕಾಲೇಜುಗಳ ಸ್ಥಾಪನೆಯ ಕಡಿವಾಣಕ್ಕೆ ಸರ್ಕಾರ ಮುಂದಾಗುವುದೇ ;

(ಆ) ಹಾಲಿ ಇರುವ ಕಾಲೇಜುಗಳಲ್ಲಿ ಕಲಿಯಲು ಖಾಲಿ ಇರುವ ಸೀಟುಗಳು ಭರ್ತಿಯಾಗದಿರುವುದು ಕಂಡುಬಂದಿದೆಯೇ ;

(ಇ) ಇದಕ್ಕೆ ಬೇಡಿಕೆ ಇಲ್ಲದ ಕಾರಣಕ್ಕೆ ಹೀಗಾಗಿದೆಯೇ ಅಥವಾ ಕಲಿಯಲು ಆಸಕ್ತ ವಿದ್ಯಾರ್ಥಿಗಳ ಸಂಖ್ಯೆಗಿಂತಲೂ ಕಾಲೇಜುಗಳ ಹಾಗೂ ಸೀಟುಗಳ ಸಂಖ್ಯೆ ಜಾಸ್ತಿ ಇರುವುದೆ ಕಾರಣವಾಗಿದೆಯೇ ;

(ಈ) ಕಳೆದ ವರ್ಷ ಈ ರೀತಿ ಖಾಲಿ ಇದ್ದಂತಹ ಸೀಟುಗಳ ವಿವರಗಳನ್ನು ಕಾಲೇಜುವಾರು ವಿವರ ಒದಗಿಸುವುದು ;

(ಉ) ಇದಲ್ಲದೇ ಹೊಸ ಕೋರ್ಸ್‌ಗಳ ಪ್ರಾರಂಭಕ್ಕೆ ಮಂಜೂರಾತಿ ಹಾಗೂ ಸೀಟುಗಳ ಸಂಖ್ಯೆಯನ್ನು ಹೆಚ್ಚಳ ಮಾಡದಿರಲು ಸರ್ಕಾರ ಉದ್ದೇಶಿಸಿದೆಯೇ ; ಪ್ರಸಕ್ತ ವರ್ಷ ಎಷ್ಟು ಹೊಸ ಇಂಜಿನಿಯರಿಂಗ್ ಕಾಲೇಜು ಸ್ಥಾಪನೆಗೆ ಪ್ರಸ್ತಾವನೆ ಬಂದಿದೆ ; ಅಂತಹ ಸಂಸ್ಥೆಗಳು ಯಾವುವು (ಜಿಲ್ಲಾವಾರು ವಿವರ ನೀಡುವುದು) ?

## ಅಲ್ಪಸಂಖ್ಯಾತ ಶಾಲೆಗಳು

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೬೦೪ (೨೦೧೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಲ್ಪಸಂಖ್ಯಾತ ಶಾಲೆಗಳೆಂದು ಪ್ರಮಾಣಪತ್ರ ಪಡೆದುಕೊಳ್ಳಲು ಸರ್ಕಾರ ವಿಧಿಸಿರುವ ಷರತ್ತುಗಳೇನು ;

(ಆ) ಅನುದಾನ ರಹಿತ ಶಾಲೆಗಳು ಸುಳ್ಳು ಪ್ರಮಾಣಪತ್ರ ಪಡೆದುಕೊಳ್ಳುತ್ತಿರುವ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; ಈ ರೀತಿ ಸುಳ್ಳು ಪ್ರಮಾಣ ಪತ್ರ ಪಡೆದುಕೊಂಡಿರುವ ಶಾಲೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆಯ ಅನ್ವಯ ಎಷ್ಟು ಅನುದಾನ ರಹಿತ ಶಾಲೆಗಳಲ್ಲಿ ಶೇ. ೨೫ ರಷ್ಟು ಬಡ ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಲಾಗಿದೆ ; ನೀಡದಿರುವ ಶಾಲೆಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ (ಜಿಲ್ಲಾವಾರು ವಿವರ ನೀಡುವುದು) ?

## ಪ್ರೊ : ವೈದ್ಯನಾಥನ್ ವರದಿ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :-**

೧೬೦೫ (೨೦೧೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಈ ಹಿಂದೆ ಸರ್ಕಾರ ಕೈಗೊಂಡ ಪ್ರೊ: ವೈದ್ಯನಾಥನ್ ವರದಿಯ ಅನುಷ್ಠಾನ ಪ್ರಕ್ರಿಯೆ ಕುಂಠಿತವಾಗಿರುವದು ಸರ್ಕಾರದ ಗಮನದಲ್ಲಿದೆಯೇ ;

(ಆ) ಈ ವರದಿಯ ಅನುಷ್ಠಾನದಲ್ಲಿರುವ ಸಮಸ್ಯೆಗಳೇನು ;

(ಇ) ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ಶಾಲಾ–ಕಾಲೇಜುಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರ ಸ್ಥಾನಮಾನ, ಸಂಬಳ ಮತ್ತು ಭತ್ಯೆ ಹಾಗೂ ಬಡ್ತಿಯ ಕುರಿತಾದ ವೃಂದ ಮತ್ತು ನೇಮಕಾತಿಯ ನಿಯಮಗಳು ಸಿದ್ಧವಾಗಿದೆಯೇ ; ಇಲ್ಲದಿದ್ದಲ್ಲಿ, ಯಾವ ಅವಧಿಯೊಳಗೆ ಸಿದ್ಧಪಡಿಸಿ ಅನುಷ್ಠಾನಗೊಳಿಸಲಾಗುವುದು ?

## ಎನ್.ಸಿ.ಸಿ. ವಿದ್ಯಾರ್ಥಿಗಳಿಗೆ ಸಮವಸ್ತ್ರ ವಿತರಣೆ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೬೦೬ (೨೦೧೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಶಾಲಾ ಕಾಲೇಜುಗಳಲ್ಲಿ ಎನ್.ಸಿ.ಸಿ. ತರಬೇತಿ ಪಡೆಯುತ್ತಿರುವ ಕೆಡೆಟ್‌ಗಳಿಗೆ ಅಗತ್ಯವಿರುವ ಸಮವಸ್ತ್ರಗಳ ಪೂರೈಕೆಯಲ್ಲಿನ ಕೊರತೆ ಸರ್ಕಾರದ ಗಮನದಲ್ಲಿದೆಯೇ ;

(ಆ) ಈ ಕೆಡೆಟ್‌ಗಳಿಗೆ ಸಮವಸ್ತ್ರ ಒದಗಿಸುವ ಜವಾಬ್ದಾರಿ ಯಾರದು ;

(ಇ) ವಿದ್ಯಾರ್ಥಿಗಳಿಗೆ ಬಹುಮುಖ್ಯವಾದ ತರಬೇತಿಗೆ ಅವಶ್ಯಕವಾಗಿರುವ ಸಮವಸ್ತ್ರಗಳನ್ನು (ಶೂ, ಬೆಲ್ಟ್, ಟೋಪಿ ಸೇರಿದಂತೆ) ಪೂರ್ಣ ಪ್ರಮಾಣದಲ್ಲಿ ಒದಗಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ರಾಜ್ಯದಲ್ಲಿ ವಿದ್ಯಾರ್ಥಿಗಳಿಗೆ ಎನ್.ಸಿ.ಸಿ. ತರಬೇತಿ ನೀಡಲು ಸರ್ಕಾರ ಮಾಡುತ್ತಿರುವ ವಾರ್ಷಿಕ ವೆಚ್ಚದ ವಿವರ ನೀಡುವುದು ;

(ಉ) ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಯಲ್ಲಿ ವೃದ್ಧಿಯಾಗುತ್ತಿರುವುದರಿಂದ ಈ ಸಂಖ್ಯೆಗೆ ಅನುಗುಣವಾಗಿ ಎನ್.ಸಿ.ಸಿ. ತರಬೇತಿಯನ್ನು ನೀಡಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಗ್ರಾಮೀಣ ಗ್ರಂಥಾಲಯಗಳ ಅಭಿವೃದ್ಧಿ

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೦೭ (೨೦೫೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣ ಗ್ರಂಥಾಲಯಗಳಲ್ಲಿ ತರಬೇತಿ ಹೊಂದಿರುವ ಸಿಬ್ಬಂದಿ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ದೂರದರ್ಶನ ಮತ್ತು ಕಂಪ್ಯೂಟರ್‌ಗಳು ಜನರಲ್ಲಿ ಓದುವ ಹವ್ಯಾಸವನ್ನು ಕಡಿಮೆ ಮಾಡುತ್ತಿರುವ ಈ ಕಾಲದಲ್ಲಿ ಜನರಲ್ಲಿ ಪುಸ್ತಕಗಳನ್ನು ಓದುವ ಅಭಿರುಚಿ ಹೆಚ್ಚಿಸಲು ಮತ್ತು ಸಿಬ್ಬಂದಿಗೆ ಉತ್ತಮ ತರಬೇತಿ ನೀಡುವಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ಡಾ॥ ಸ್ಯಾಮ್ ಪಿತ್ರೋಡಾರವರ ಅಧ್ಯಕ್ಷತೆಯಲ್ಲಿ ರಚಿಸಲಾಗಿದ್ದ ಜ್ಞಾನ ಆಯೋಗವು ಈ ಬಗ್ಗೆ ನೀಡಿದ ಸಲಹೆಗಳನ್ನು ಜಾರಿಗೊಳಿಸಲಾಗಿದಯೇ ?

## ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿರುವುದು

**ಡಾ॥ ಮತ್ತಿಕಟ್ಟೆ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೦೮ (೨೦೧೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ಬಹುತೇಕ ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿದ್ದು, ರೋಗಗ್ರಸ್ಥರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅಪೌಷ್ಠಿಕತೆಯನ್ನು ನಿವಾರಿಸಲು ಮತ್ತು ಮಕ್ಕಳ ಆರೋಗ್ಯ ಕಾಪಾಡುವಲ್ಲಿ ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು ;

(ಇ) ರಾಜ್ಯಾದ್ಯಂತ ಅಂಗನವಾಡಿ ಕೇಂದ್ರಗಳಲ್ಲಿನ ಎಲ್ಲಾ ಮಕ್ಕಳಿಗೆ ಕೋಳಿ ಮೊಟ್ಟೆ ಮತ್ತು ಹಾಲು ಇವುಗಳನ್ನು ನಿರಂತರವಾಗಿ ಒದಗಿಸಲಾಗುವುದೆ ;

(ಈ) ಅಪೌಷ್ಠಿಕತೆ ಸಮಸ್ಯೆಗಳ ಬಗ್ಗೆ ಉಚ್ಚ ನ್ಯಾಯಾಲಯದ ಮಾನ್ಯ ನ್ಯಾಯಮೂರ್ತಿ ಎನ್.ಕೆ. ಪಾಟೀಲ್ ನೇತೃತ್ವದ ಸಮಿತಿ ಮಾಡಿದ ಎಲ್ಲಾ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲಾಗುವುದೇ ; ಹಾಗಿದ್ದಲ್ಲಿ, ಯಾವಾಗ ?

## ಗ್ರಾಮ ಪಂಚಾಯತ್‌ಗಳಲ್ಲಿ ಶೇ.೩ರಷ್ಟು ಅಂಗವಿಕಲರ ಅನುದಾನ ಮೀಸಲು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೦೯ (೨೦೩೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳಲ್ಲಿ ೨೦೧೩-೧೪ನೇ ಸಾಲಿನಲ್ಲಿ ಶೇ.೩ರಷ್ಟು ಅನುದಾನವನ್ನು ಅಂಗವಿಕಲರಿಗೆ ಮೀಸಲಿರಿಸಲಾಗಿತ್ತೆ ;

(ಆ) ಯಾವ ಯಾವ ಪಂಚಾಯಿತಿಯಲ್ಲಿ ಪಂಚಾಯತ್‌ವಾರು ಎಷ್ಟು ಅನುದಾನವನ್ನು ಮೀಸಲಿಡಲಾಗಿತ್ತು (ಪಂಚಾಯಿತಿಗಳ ಪೂರ್ಣ ವಿವರ ನೀಡುವುದು) ;

(ಇ) ಅಂಗವಿಕಲರಿಗೆ ಅನುದಾನವನ್ನು ಮೀಸಲಿರಿಸದೇ ಇದ್ದಂತಹ ಪಂಚಾಯಿತಿಗಳ ಬಗ್ಗೆ ಸರ್ಕಾರ ಗಮನಿಸಿದೆಯೇ ;

(ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣ ವಿವರ ನೀಡುವುದು) ?

## ಜಿಲ್ಲಾ ಯೋಜನಾ ಸಮಿತಿ ಸಭೆ ನಡೆಸದ ಜಿಲ್ಲಾ ಪಂಚಾಯಿತಿಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೧೦(೨೦೩೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ ಜಿಲ್ಲಾ ಯೋಜನಾ ಸಮಿತಿ ಪ್ರತಿ ವರ್ಷ ತನ್ನ ಜಿಲ್ಲಾ ಯೋಜನಾ

ಸಮಿತಿಯ ಸಭೆಯನ್ನು ಕರೆಯಲಾಗಿದೆ (ಜಿಲ್ಲಾವಾರು ಪೂರ್ಣ ವಿವರ ನೀಡುವುದು) ;

(ಆ) ಈ ಸಮಿತಿಯು ಕಳೆದ ಮೂರು ವರ್ಷಗಳಲ್ಲಿ ಪ್ರತಿ ವರ್ಷ ಗ್ರಾಮ ಪಂಚಾಯತಿಯಿಂದ ಎಷ್ಟು ಹಣವನ್ನು ವಂತಿಗೆಯಾಗಿ ಪಡೆದಿದೆ (ಜಿಲ್ಲಾವಾರು ಮಾಹಿತಿ ನೀಡುವುದು) ;

(ಇ) ಪಡೆದಿದ್ದಲ್ಲಿ, ಈ ವಂತಿಗೆಯನ್ನು ಯಾವ ಉದ್ದೇಶಕ್ಕಾಗಿ ಬಳಸಲಾಗಿದೆ (ಜಿಲ್ಲಾವಾರು ಮಾಹಿತಿ ನೀಡುವುದು) ;

(ಈ) ಜಿಲ್ಲಾ ಯೋಜನಾ ಸಮಿತಿ ಸಭೆ ನಡೆಸದ ಜಿಲ್ಲಾ ಪಂಚಾಯಿತಿಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣ ವಿವರ ನೀಡುವುದು) ?

## ಕೃಷಿ ಭೂಮಿಯ ಪರಿವರ್ತನೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೧೧ (೨೦೧೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣ ಪ್ರದೇಶದಲ್ಲಿ ಒಂದು ಎಕ್ರೆಗೂ ಮೇಲ್ಪಟ್ಟು ಕೃಷಿ ಜಮೀನು ಹೊಂದಿದವರಿಗೆ ಫಾರ್ಮ್ ಹೌಸ್ (ಕೃಷಿ ಶೆಡ್) ನಿರ್ಮಿಸಲು ಸಹಕಾರಿ ಬ್ಯಾಂಕ್‌ಗಳ ಮೂಲಕ ಶೇ. ೩ರ ಬಡ್ಡಿದರದಲ್ಲಿ ಒಂದು ಲಕ್ಷ ರೂಪಾಯಿಗಳ ವರೆಗೆ ಸಾಲ ಸೌಲಭ್ಯ ನೀಡುವ ಯೋಜನೆಯನ್ವಯ ಫಾರ್ಮ್ ಹೌಸ್ ನಿರ್ಮಿಸಲು ಪರವಾನಿಗೆ ಕೋರಿ ಸ್ಥಳೀಯ ಗ್ರಾಮ ಪಂಚಾಯತಿಗೆ ಅರ್ಜಿ ಸಲ್ಲಿಸಿದರೆ,

ಗ್ರಾಮ ಪಂಚಾಯತಿನ ಅಧಿಕಾರಿಗಳು ಪರವಾನಿಗೆ ನೀಡಲು ಭೂ ಪರಿವರ್ತನೆ ಮಾಡಿಸಬೇಕೆನ್ನುತ್ತಾರೆ ಎಂಬ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಂದು ವೇಳೆ ಭೂ ಪರಿವರ್ತನೆ ಮಾಡಿಸಿದರೆ, ಆಗ ಆ ಜಮೀನು ಕೃಷಿ ಭೂಮಿಯಾಗಿ ಉಳಿಯಲು ಸಾಧ್ಯವಿಲ್ಲ ಮತ್ತು ಸದ್ರಿ ಯೋಜನೆಯನ್ವಯ ಫಾರ್ಮ್ ಹೌಸ್ ನಿರ್ಮಿಸಲು ಸಾಧ್ಯವಿಲ್ಲ, ಎಂಬುದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಪೂರ್ಣ ವಿವರವನ್ನು ನೀಡುವುದು) ?

## ಬಸವ ವಸತಿ ಯೋಜನೆಯಲ್ಲಿ ಫಲಾನುಭವಿಗಳ ಅಕ್ರಮ ಆಯ್ಕೆಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೬೧೨ (೨೦೩೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಸವ ವಸತಿ ಯೋಜನೆಯಡಿ ಫಲಾನುಭವಿಗಳನ್ನು ಯಾವ ಮಾನದಂಡದಡಿ ಆಯ್ಕೆ ಮಾಡಲಾಗುವುದು ಮತ್ತು ಆಯ್ಕೆ ಮಾಡುವವರು ಯಾರು ;

(ಆ) ಈ ಯೋಜನೆಯಡಿ ಫಲಾನುಭವಿಗಳನ್ನು ನಿಯಮಕ್ಕೆ ವಿರುದ್ಧವಾಗಿ ಕ್ಷೇತ್ರದ ಶಾಸಕರು ಆಯ್ಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು (ಪೂರ್ಣ ವಿವರ ನೀಡುವುದು) ?

## ಪರಿಶಿಷ್ಟ ಜಾತಿಗೆ ಮೀಸಲಿದ್ದ ಬ್ಯಾಕ್‌ಲಾಗ್ ಹುದ್ದೆಗಳು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೧೩ (೨೦೧೭) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗದ ಜಗದ್ಗುರು ಮುರುಘರಾಜೇಂದ್ರ ವಿದ್ಯಾಪೀಠ (ರಿ) ಇದರ ಅನುದಾನಿತ ಪದವಿ ಕಾಲೇಜಿನಲ್ಲಿ ೨೦೦೩ರ ಶೈಕ್ಷಣಿಕ ಅವಧಿಯಲ್ಲಿ ಪರಿಶಿಷ್ಟ ಜಾತಿಗೆ ಮೀಸಲಿದ್ದ ಬ್ಯಾಕ್‌ಲಾಗ್ ಸಮಾಜಶಾಸ್ತ್ರ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನಿಸಿ ಅಭ್ಯರ್ಥಿಯನ್ನು ಆಯ್ಕೆ ಮಾಡಿಕೊಂಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅರ್ಹ ಅಭ್ಯರ್ಥಿಯನ್ನು ಸದರಿ ಹುದ್ದೆಗೆ ನೇಮಕ ಮಾಡಿಕೊಂಡಿದ್ದಾಗ್ಯೂ ಕೂಡಾ ಕರ್ತವ್ಯಕ್ಕೆ ತೆಗೆದುಕೊಳ್ಳುವಲ್ಲಿ ವಿಳಂಬ ಧೋರಣೆ ಹಾಗೂ ಮೀನಮೇಷ ಎಣಿಸುತ್ತಿರುವುದು ನಿಜವೇ ; ಇದಕ್ಕೆ ಕಾರಣಗಳೇನು ;

(ಇ) ಈ ಬಗ್ಗೆ ಆಡಳಿತ ಮಂಡಳಿಗೆ ಸರ್ಕಾರ ಆದೇಶಿಸಿದ್ದರೂ ಅದನ್ನು ಪಾಲಿಸದಿರುವ ಬಗ್ಗೆ ಸರ್ಕಾರದ ಕ್ರಮಗಳೇನು ;

(ಈ) ಕಳೆದ ೧೨ ವರ್ಷಗಳಿಂದಲೂ ನಡೆಯುತ್ತಿರುವ ಇಂತಹ ಪ್ರಕ್ರಿಯೆಯ ಘಟನಾವಳಿಗಳಿಂದ ಒಬ್ಬ ಅರ್ಹ

ಸಮಾಜಶಾಸ್ತ್ರ ಉಪನ್ಯಾಸಕನಾಗುವ ಪರಿಶಿಷ್ಟ ಜಾತಿ ಅಭ್ಯರ್ಥಿಗೆ ಅನ್ಯಾಯವಾದಂತಾಗುವುದೆಂದು ಸರ್ಕಾರ ಭಾವಿಸುವುದಿಲ್ಲವೆ ;

(ಉ) ಹಾಗಿದ್ದಲ್ಲಿ, ನ್ಯಾಯವಿಳಂಬದಿಂದ ತೊಳಲಾಟದಲ್ಲಿರುವ ಅಭ್ಯರ್ಥಿಗೆ ನ್ಯಾಯ ಒದಗಿಸಲು ಸರ್ಕಾರ ಮುಂದಾಗುವುದೇ ; ಯಾವಾಗ ಸದರಿ ಹುದ್ದೆಯ ನೇಮಕಾತಿ ಆದೇಶವನ್ನು ಹೊರಡಿಸಲು ಆಡಳಿತ ಮಂಡಳಿಗೆ ನಿರ್ದೇಶಿಸಲಾಗುತ್ತದೆ ; ಇಲ್ಲದಿದ್ದಲ್ಲಿ, ಕಾರಣಗಳೇನು ತಿಳಿಸುವುದು ; ಕಾನೂನು ಉಲ್ಲಂಘಿಸಿದವರ ಮೇಲೆ ಸರ್ಕಾರ ಯಾವ ಕ್ರಮಕೈಗೊಳ್ಳುವುದು ?

## ಯಳಂದೂರಿನ ಶ್ರೀ ಗೌರೇಶ್ವರ ದೇವಾಲಯದ ಅಭಿವೃದ್ಧಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೬೧೪ (೨೦೧೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಯಳಂದೂರಿನ ಶ್ರೀ ಗೌರೇಶ್ವರ ದೇವಾಲಯದ (ಬಳೆಮಂಟಪ) ಜೀರ್ಣೋದ್ಧಾರಕ್ಕೆ ಕೈಗೊಂಡಿರುವ ಕ್ರಮಗಳೇನು ;

(ಆ) ದಿವಾನ್ ಪೂರ್ಣಯ್ಯ ವಸ್ತು ಸಂಗ್ರಹಾಲಯದ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಶ್ರೀ ಗೌರೇಶ್ವರ ದೇವಾಲಯ, ದಿವಾನ್ ಪೂರ್ಣಯ್ಯ ವಸ್ತು ಸಂಗ್ರಹಾಲಯ ಇವುಗಳೆಲ್ಲಾ ಒಳಗೊಂಡಂತೆ ಒಂದು ವಿಶಾಲವಾದ

ಕಾಂಪೌಂಡ್ ನಿರ್ಮಿಸಿ ಉದ್ಯಾನವನವನ್ನು ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಈ) ದೇವಾಲಯ ಮತ್ತು ವಸ್ತು ಸಂಗ್ರಹಾಲಯದ ಜಾಗ ಅತಿಕ್ರಮಣವಾಗಿದ್ದು, ಸರ್ವೇ ನಡೆಸಿ ಅತಿಕ್ರಮವನ್ನು ತೆರವುಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಹಜ್ ಭವನ ನಿರ್ಮಾಣ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೧೫ (೨೦೧೯) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ನಗರದಲ್ಲಿ ಹಜ್ ಭವನವನ್ನು ನಿರ್ಮಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ ; ಈ ಬಗ್ಗೆ ವಿವರಗಳನ್ನು ಒದಗಿಸುವುದು ;

(ಆ) ಈ ಭವನದ ನಿರ್ಮಾಣಕ್ಕೆ ಸ್ಥಳವನ್ನು ಗುರುತಿಸಲಾಗಿದೆಯೇ ; ಇದಕ್ಕಾಗಿ ಆಯವ್ಯಯವನ್ನು ಹಜ್ ಮಂಡಳಿಯಿಂದ ಮತ್ತು ಸರ್ಕಾರದಿಂದ ಒದಗಿಸಲಾಗಿದೆಯೇ ; ಒದಗಿಸಿದ್ದರೆ ಎಷ್ಟೆಷ್ಟು (ವಿವರ ಒದಗಿಸುವುದು) ?

**ಶೀಘ್ರಗತಿಯಲ್ಲಿ ಕನ್ನಡ ಅಧ್ಯಯನ ಕೇಂದ್ರದ ಚಾಲನೆ**

**ಡಾ॥ ಜೈಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೬೧೬ (೨೦೨೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ದೊರಕಿದ್ದರೂ, ಇದರ ಅಧ್ಯಯನ ಕೇಂದ್ರವನ್ನು ಸ್ಥಾಪಿಸುವ ಕಾರ್ಯವು ಇನ್ನೂ ಕುಂಠಿತಗೊಂಡಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಕುಂಠಿತಗೊಂಡಿರುವ ಈ ಅಧ್ಯಯನ ಕೇಂದ್ರವನ್ನು ಶೀಘ್ರಗತಿಯಲ್ಲಿ ಪ್ರಾರಂಭಿಸಲು ಸರ್ಕಾರದ ಕ್ರಮಗಳೇನು ?

**ಅಸಂಘಟಿತ ಕಲಾವಿದರ ಹಿತರಕ್ಷಣೆ**

**ಡಾ॥ ಜೈಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೬೧೭ (೨೦೨೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೩ ವರ್ಷಗಳಿಂದ ಅಸಂಘಟಿತ ಕಲಾವಿದರಿಗೆ ವಾದ್ಯ ಪರಿಕರಗಳಿಗೆ ಹಾಗೂ ವೇಷ ಭೂಷಣ ಖರೀದಿಗಾಗಿ ಸರ್ಕಾರದಿಂದ ಎಷ್ಟು ಧನ ಸಹಾಯ ನೀಡಲಾಗಿದೆ ;

(ಆ) ಪ್ರಸ್ತುತ ಸಾಲಿನಲ್ಲಿ ಈ ಅಸಂಘಟಿತ ಕಲಾವಿದರಿಗೆ ವಾದ್ಯ ಪರಿಕರಗಳಿಗೆ ಹಾಗೂ ವೇಷ ಭೂಷಣ ಖರೀದಿಗಾಗಿ ಸರ್ಕಾರ ಎಷ್ಟು ಹಣವನ್ನು ನಿಗದಿಪಡಿಸಲಾಗಿದೆ ?

**ಸರ್ಕಾರಿ ಆಂಗ್ಲ ಮಾಧ್ಯಮ ಶಾಲೆಗಳನ್ನು ಪ್ರಾರಂಭಿಸುವುದು**

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೬೧೮ (೨೦೨೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾಷಾ ತಾರತಮ್ಯ ಮಾಡದೇ ಎಲ್ಲಾ ಸರ್ಕಾರಿ ಶಾಲೆಗಳಲ್ಲೂ ಸಹ ಆಂಗ್ಲ ಮಾಧ್ಯಮ ತರಗತಿಗಳನ್ನು ಪ್ರಾರಂಭಿಸುವ ಬಗ್ಗೆ ಸರ್ಕಾರದ ನಿಲುವೇನು; ಒಂದನೇ ತರಗತಿಯಿಂದಲೇ ಆಂಗ್ಲ ಭಾಷಾ ಕಲಿಕೆಗೆ ಒತ್ತು ನೀಡುವ ಬಗ್ಗೆ ಕ್ರಮ ವಹಿಸಲು ಸರ್ಕಾರ ಮುಂದಾಗುವುದೇ ;

(ಆ) ಅನುದಾನ ರಹಿತ ಶಾಲೆಗಳಲ್ಲಿರುವಂತೆ ಪ್ರತಿ ತರಗತಿವಾರು, ವಿಷಯವಾರು ನುರಿತ ಶಿಕ್ಷಕರನ್ನು ನೇಮಕ ಮಾಡುವುದರಿಂದ ಶಿಕ್ಷಣದ ಗುಣಮಟ್ಟವನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಮುಂದಾಗುವುದೇ ?

**ಶಿಕ್ಷಕರ ಕೊರತೆ**

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೬೧೯ (೨೦೨೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೆಲವು ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರಿಲ್ಲದೆ, ಶಿಕ್ಷಕರ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಬಂದಿದಲ್ಲಿ, ಅಂತಹ ಶಾಲೆಗಳು ಯಾವುವು; ಸದರಿ ಶಾಲೆಗಳಿಗೆ ೧:೩೦ ಅಥವಾ ೧:೩೫ ಅನುಪಾತದ ಅಡಿಯಲ್ಲಿ ಶಿಕ್ಷಕರ ನೇಮಕ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ?

## ಸರ್ಕಾರಿ ಶಾಲೆಗಳ ಮಕ್ಕಳ ದಾಖಲಾತಿಯಲ್ಲಿ ಕುಸಿತ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೬೨೦ (೨೦೨೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಿಂದ ಸರ್ಕಾರಿ ಶಾಲೆಗಳಲ್ಲಿ ದಾಖಲಾದ ಮಕ್ಕಳ ಸಂಖ್ಯೆ ಎಷ್ಟು (ವರ್ಷವಾರು, ಶಾಲಾವಾರು ಮಾಹಿತಿ ನೀಡುವುದು) ;

(ಆ) ಸರ್ಕಾರಿ ಶಾಲೆಗಳಲ್ಲಿ ಇತ್ತೀಚೆಗೆ ಮಕ್ಕಳ ದಾಖಲಾತಿ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು ;

(ಇ) ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕುಸಿದು ಶೂನ್ಯ ಶಾಲೆಗಳಾಗಿ ಪರಿಗಣಿಸಿ ಮುಚ್ಚಲ್ಪಟ್ಟ ಶಾಲೆಗಳ ಸಂಖ್ಯೆ ಎಷ್ಟು (ವಲಯವಾರು ಮಾಹಿತಿ ನೀಡುವುದು) ?

## ಸರ್ಕಾರಿ ಶಾಲೆಗಳಲ್ಲಿ ಗುಮಾಸ್ತರ ಮತ್ತು ಡಿ ಗುಂಪಿನ ನೌಕರರ ಹುದ್ದೆ ಸೃಜನೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೬೨೧ (೨೦೨೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :-

ಸರ್ಕಾರಿ ಶಾಲೆಗಳಲ್ಲಿ ಕಚೇರಿ ಕಡತಗಳ ನಿರ್ವಹಣೆಗಾಗಿ ಪ್ರತ್ಯೇಕವಾಗಿ ಗುಮಾಸ್ತರ ಹುದ್ದೆಯನ್ನು ಹಾಗೂ ಶೌಚಾಲಯಗಳನ್ನು ಶುಚಿಗೊಳಿಸಲು "ಡಿ" ಗುಂಪಿನ ನೌಕರರ ಹುದ್ದೆಯನ್ನು ಸೃಜಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಿದ್ದಲ್ಲಿ, ಯಾವಾಗ?

## ಹೈದರಾಬಾದ್-ಕರ್ನಾಟಕ ಪ್ರದೇಶದಲ್ಲಿ ಮಹಿಳಾ ಸಾಕ್ಷರತೆ

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೧೬೨೨ (೨೦೩೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈದ್ರಾಬಾದ್-ಕರ್ನಾಟಕ ಪ್ರದೇಶವಾದ ರಾಯಚೂರು, ಕೊಪ್ಪಳ, ಬೀದರ, ಗುಲ್ಬರ್ಗಾ, ಯಾದಗಿರಿ ಬಳ್ಳಾರಿಯಲ್ಲಿ "ಮಹಿಳಾ ಸಾಕ್ಷರತಾ" ಪ್ರಮಾಣ ಎಷ್ಟಿದೆ ;

(ಆ) ಇತ್ತೀಚೆಗೆ ಪ್ರಕಟವಾದ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ ಯಲ್ಲಿ ವಿದ್ಯಾರ್ಥಿನಿಯರ ಉತ್ತೀರ್ಣ ಪ್ರಮಾಣ ಎಷ್ಟು ;

(ಇ) ಈ ಫಲಿತಾಂಶ ಹಿಂದಿನಕ್ಕಿಂತ ಕಡಿಮೆಯಾಗಿದೆಯೇ ; ಅದಕ್ಕೆ ಕಾರಣಗಳೇನು ; ಬಾಲಕಿಯರ ಪ್ರೌಢಶಾಲೆ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರಗಳೊಂದಿಗೆ) ?

## ಬಾಲಕಿಯರ ಪ್ರೌಢಶಾಲೆಗಳು

**ಶ್ರೀಮತಿ ತಾರಾ ಅನೂರಾಧ (ನಾಮನಿರ್ದೇಶನ ಹೊಂದಿದವರು) :-**

೧೬೨೩ (೨೦೩೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಂವಿಧಾನ ೩೭೧(ಜೆ) ತಿದ್ದುಪಡಿ ಅನ್ವಯ ಮಹಿಳಾ ಶಿಕ್ಷಣಕ್ಕೆ ಯಾವುದಾದರೂ ವಿಶೇಷ ಕ್ರಮ ಕೈಗೊಳ್ಳಲಾಗಿದೆಯೇ ;

(ಆ) ಬಾಲಕಿಯರ ಪ್ರೌಢಶಾಲೆಯಲ್ಲಿ ಎಲ್ಲಾ ವಿಷಯಗಳ ಶಿಕ್ಷಕರು ಇದ್ದಾರೆಯೇ ; ಒಂದು ವೇಳೆ ಇಲ್ಲದಿದ್ದರೆ, ಅದರ ಪರಿಣಾಮ ವಿದ್ಯಾರ್ಥಿನಿಯರ ಉತ್ತೀರ್ಣ ಸಂಖ್ಯೆ ಕಡಿಮೆಯಾಗುವುದರಲ್ಲಿ ಆಶ್ಚರ್ಯವಿಲ್ಲ ಅಲ್ಲವೇ ;

(ಇ) ಹೈದ್ರಾಬಾದ್-ಕರ್ನಾಟಕ ಪ್ರದೇಶದಲ್ಲಿ ೧ ರಿಂದ ೧೦ನೇ ತರಗತಿವರೆಗೆ ಓದುತ್ತಿದ್ದು ಮಧ್ಯದಲ್ಲೇ ಶಾಲೆ ಬಿಟ್ಟ ಬಾಲಕಿಯರ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ಕೊಡುವುದು) ; ಇಂತಹ ಬಾಲಕಿಯರನ್ನು ಮುಖ್ಯವಾಹಿನಿಗೆ ತರಲು ಕೈಗೊಂಡ ಕ್ರಮಗಳು ಏನು ?

## ಸರ್ಕಾರಿ ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೬೨೪ (೨೦೫೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು ;

(ಆ) ಸರ್ಕಾರಿ ಪ್ರೌಢಶಾಲೆಗಳಿಗೆ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಮಂಜೂರಾತಿಗೆ ಯಾವ ಮಾನದಂಡಗಳನ್ನು ಪಾಲಿಸಲಾಗುತ್ತಿದೆ (ವಿವರ ನೀಡುವುದು) ;

(ಇ) ಸದರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಈ) ಹೀಗೆ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರನ್ನು ನೇಮಕ ಮಾಡಲು ಸರ್ಕಾರ ಇದುವರೆಗೂ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೬೨೫ (೨೦೪೭) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಪ್ರಾಂಶುಪಾಲರ ಎಷ್ಟು ಹುದ್ದೆಗಳು ಖಾಲಿ ಇವೆ ; ಯಾವ ಕಾಲದಿಂದ ಖಾಲಿ ಇವೆ (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಸದರಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳನ್ನು ಬಡ್ತಿ ಮೂಲಕ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು) ;

(ಇ) ಯಾವ ಕಾಲಮಿತಿಯಲ್ಲಿ ಬಡ್ತಿ ಮೂಲಕ ಭರ್ತಿ ಮಾಡಲು ಸರ್ಕಾರ ಕ್ರಮ ವಹಿಸುತ್ತದೆ ?

## ಪ್ರೊ॥ ವೈದ್ಯನಾಥನ್ ವರದಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೬೨೬ (೨೦೫೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರೊ॥ ವೈದ್ಯನಾಥನ್ ವರದಿ ಆಧರಿಸಿ ದೈಹಿಕ ಶಿಕ್ಷಣ ವಿಭಾಗದಲ್ಲಿ ಸುಧಾರಣೆ ತರಲು ನೇಮಕಾತಿ ನಿಯಮಾವಳಿಗಳಿಗೆ ತಿದ್ದುಪಡಿ ತರಲು ಸರ್ಕಾರ ನಿರ್ಧರಿಸಿದೆಯೇ ;

(ಆ) ಹಾಗಾದರೆ, ನೇಮಕಾತಿ ನಿಯಮಗಳ ತಿದ್ದುಪಡಿಯ ಮುಖ್ಯ ಅಂಶಗಳಾವುವು (ವಿವರ ನೀಡುವುದು) ;

(ಇ) ತಿದ್ದುಪಡಿ ಸಂಬಂಧ ಸರ್ಕಾರ ಇದುವರೆಗೂ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು) ;

(ಈ) ಯಾವ ಕಾಲಮಿತಿಯಲ್ಲಿ ತಿದ್ದುಪಡಿಯನ್ನು ಜಾರಿಗೆ ತರಲಾಗುವುದು ?

## ಎ.ಐ.ಸಿ.ಟಿ.ಇ. ಪರಿಷ್ಕೃತ ವೇತನ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೬೨೭ (೨೦೪೬) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜಿನ ಅಧ್ಯಾಪಕರಿಗೆ ಎ.ಐ.ಸಿ.ಟಿ.ಯ ಪರಿಷ್ಕೃತ ವೇತನ ಸಂಬಂಧ ಬಾಕಿ ಮೊತ್ತ ನೀಡಬೇಕಾಗಿದೆಯೇ ;

(ಆ) ಹಾಗಾದರೆ, ಸದರಿ ಕಾಲೇಜಿನ ಎಷ್ಟು ಮಂದಿ ಅಧ್ಯಾಪಕರಿಗೆ ಬಾಕಿ ಮೊತ್ತವನ್ನು ನೀಡಬೇಕಾಗಿದೆ (ಪೂರ್ಣ ವಿವರಗಳೊಡನೆ) ;

(ಇ) ಸದರಿ ಅಧ್ಯಾಪಕರಿಗೆ ಯಾವ ಅವಧಿಯವರೆಗೆ ಬಾಕಿ ಮೊತ್ತ ನೀಡಬೇಕಾಗಿದೆ ; ನೀಡಬೇಕಾಗಿರುವ ಒಟ್ಟು ಬಾಕಿ ಮೊತ್ತವೆಷ್ಟು (ಪೂರ್ಣ ವಿವರಗಳೊಡನೆ) ;

(ಈ) ಸದರಿ ಬಾಕಿ ಮೊತ್ತ ಬಿಡುಗಡೆ ಮಾಡುವ ಸಂಬಂಧ ಸರ್ಕಾರ ಇದುವರೆವಿಗೂ ಕೈಗೊಂಡಿರುವ ಕ್ರಮಗಳೇನು ಯಾವ ಕಾಲಮಿತಿಯಲ್ಲಿ ಪಾವತಿಸಲಾಗುವುದು ?

## ಅನುದಾನ ರಹಿತ ದೈಹಿಕ ಶಿಕ್ಷಣ ಕಾಲೇಜುಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೬೨೮ (೨೦೬೬) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅನುದಾನ ರಹಿತ ದೈಹಿಕ ಶಿಕ್ಷಣ (ಸಿಪಿಎಡ್) ಕಾಲೇಜುಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ) ;

(ಆ) ಸದರಿ ಕಾಲೇಜಿನ ಬೋಧಕರಿಗೆ ವೇತಾನಾನುದಾನ ನೀಡಲು ಸರ್ಕಾರ ಚಿಂತಿಸಿದೆಯೇ ;

(ಇ) ಹಾಗಿದ್ದರೆ, ಯಾವ ಕಾಲಮಿತಿಯಲ್ಲಿ ಸದರಿ ಕಾಲೇಜು ಬೋಧಕರಿಗೆ ವೇತನಾನುದಾನ ನೀಡಲು ಸರ್ಕಾರ ಕ್ರಮಕೈಗೊಳ್ಳುವುದೇ ?

## ಕರ್ನಾಟಕ ಚಲನಚಿತ್ರ ಅಕಾಡೆಮಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೬೨೯ (೨೦೫೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಚಲನಚಿತ್ರ ಅಕಾಡೆಮಿಯ ಕಾರ್ಯಗಳೇನು ; ಅಕಾಡೆಮಿಯ ಸ್ಥಾಪನೆಯ ಮೂಲ ಉದ್ದೇಶವೇನು ;

(ಆ) ಪ್ರಸ್ತುತ ಸದರಿ ಅಕಾಡೆಮಿಯ ಅಧ್ಯಕ್ಷರ ಹುದ್ದೆ ಖಾಲಿ ಇರುವುದು ನಿಜವೇ ;

(ಇ) ಖಾಲಿಯಿದ್ದಲ್ಲಿ ಎಷ್ಟು ಸಮಯದಿಂದ ಖಾಲಿ ಇರುತ್ತದೆ ; ಕಾರಣವೇನು ; ಯಾವಾಗ ನೇಮಕ ಮಾಡಲಾಗುವುದು ?

## ಕೆಮ್ಮಣ್ಣುಗುಂಡಿ ಗಿರಿಧಾಮ ಪ್ರವಾಸಿ ಕೇಂದ್ರದ ಪುನರಾರಂಭ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೬೩೦ (೨೦೪೯) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆಮ್ಮಣ್ಣುಗುಂಡಿ ಗಿರಿಧಾಮ ಪ್ರವಾಸಿ ಕೇಂದ್ರವು ಪ್ರವಾಸೋದ್ಯಮ ಇಲಾಖೆಯ ವತಿಯಿಂದ ನೂತನವಾಗಿ ನವೀಕರಣಗೊಂಡಿರುವುದು ನಿಜವೇ; ಕಾಮಗಾರಿ ಪೂರ್ಣಗೊಂಡಿರುವ ಕುರಿತು ವಿವರ ನೀಡುವುದು ;

(ಆ) ನವೀಕರಣಗೊಂಡಿರುವ ಪ್ರವಾಸಿ ಕೇಂದ್ರವು ಪ್ರಸ್ತುತ ಉಪಯೋಗಿಸಲ್ಪಡುತ್ತಿದೆಯೇ; ಇಲ್ಲವಾದಲ್ಲಿ, ಕಾರಣವೇನು; ಇದಕ್ಕೆ ಇರುವ ತಾಂತ್ರಿಕ ಕಾರಣಗಳೇನು ;

(ಇ) ಇದನ್ನು ಪರಿಹರಿಸಲು ಪತ್ರ ವ್ಯವಹಾರ ನಡೆಸಲಾಗಿದೆಯೇ (ವಿವರ ನೀಡುವುದು) ;

(ಈ) ಇದನ್ನು ಉಪಯೋಗಿಸಲು ಯಾವಾಗಿನಿಂದ ಪ್ರಾರಂಭಿಸಲಾಗುವುದು ?

## ಶಾಲಾ ಮಕ್ಕಳಿಗೆ ಪೂರೈಕೆ ಮಾಡಿರುವ ಸಮವಸ್ತ್ರ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೬೩೧ (೨೦೪೮) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸಕ್ತ ವರ್ಷದಲ್ಲಿ ಸರ್ಕಾರವು ಶಾಲಾ ಮಕ್ಕಳಿಗೆಂದು ಪೂರೈಕೆ ಮಾಡಿರುವ ಸಮವಸ್ತ್ರ ಕುರಿತಂತೆ ಬಟ್ಟೆಯ ಗುಣಮಟ್ಟ, ಒಟ್ಟು ಪ್ರಮಾಣ, ಒಟ್ಟು ಹಣ ಹಾಗೂ ಸರಬರಾಜು ಮಾಡಿದ ಕಂಪನಿಯ ವಿವರ ನೀಡುವುದು;

(ಆ) ನೀಡಿದ ಬಟ್ಟೆಯನ್ನು ಹೊಲಿಸಿಕೊಳ್ಳಲು ಪ್ರತಿ ವಿದ್ಯಾರ್ಥಿ/ ವಿದ್ಯಾರ್ಥಿನಿಗೆ ತಗಲುವ ಅಂದಾಜು ಖರ್ಚು ಮತ್ತು ಈ ಖರ್ಚನ್ನು ಯಾರು ಭರಿಸುತ್ತಾರೆ (ವಿವರ ನೀಡುವುದು) ?

## ಅ.ನ. ಕೃಷ್ಣರಾಯರ(ಅ.ನ.ಕೃ.) ಮನೆಯನ್ನು ಸ್ಮಾರಕವಾಗಿಸುವುದು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :-**

೧೬೩೨ (೨೦೫೧) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಾಡು ನುಡಿಗೆ ದುಡಿದ ಕನ್ನಡ ಚಳುವಳಿಯ ನೇತಾರ, ಕಾದಂಬರಿ ಸಾರ್ವಭೌಮ, ಅ.ನ. ಕೃಷ್ಣರಾಯರ ಮನೆಯು ಬೆಂಗಳೂರಿನಲ್ಲಿದ್ದು, ಅದನ್ನು ಸ್ಮಾರಕವಾಗಿಸುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ಉದ್ದೇಶವಿದ್ದಲ್ಲಿ, ಎಷ್ಟು ಹಣವನ್ನು ತೊಡಗಿಸಲಾಗುತ್ತದೆ ;

(ಇ) ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಿ ಮುಗಿಸುವ ಉದ್ದೇಶ ಸರ್ಕಾರಕ್ಕಿದೆ ;

(ಈ) ಸದರಿ ವಿಚಾರವು ಪ್ರಸ್ತುತ ಯಾವ ಹಂತದಲ್ಲಿದೆ; ಇದನ್ನು ನೆರವೇರಿಸಲು ಇಲಾಖೆಯಿಂದ ಮಾಡಿರುವ ಪ್ರಯತ್ನಗಳೇನು ?

## ಸಮಗ್ರ ಪ್ರವಾಸೋದ್ಯಮ ಬೆಳವಣಿಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೩೩ (೨೦೬೨) ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರವಾಸೋದ್ಯಮದ ಸಮಗ್ರ ಬೆಳವಣಿಗೆಗಾಗಿ ಎಷ್ಟು ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅಭಿವೃದ್ಧಿ ಸಮಿತಿಗಳನ್ನು ರಚಿಸಲಾಗಿದೆ; ಈ ಸಮಿತಿಯ ಸದಸ್ಯರ ಆಯ್ಕೆಗೆ ಮಾನದಂಡವೇನು ;

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರವಾಸೋದ್ಯಮದ ಸಮಗ್ರ ಬೆಳವಣಿಗೆಗಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಎಷ್ಟು ಸಭೆಗಳನ್ನು ನಡೆಸಲಾಗಿದೆ; ಈ ಸಮಿತಿಯ ಶಿಫಾರಸ್ಸು ಮತ್ತು ಯೋಜನೆಗಳೇನು (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು) ;

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕರಾವಳಿ ವೃತ್ತ ಅಭಿವೃದ್ಧಿಗೆ ಬಿಡುಗಡೆಯಾದ ಕೇಂದ್ರ ಮತ್ತು ರಾಜ್ಯ ಸರ್ಕಾರದ ಅನುದಾನದಲ್ಲಿ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; ಇದರನ್ವಯ ಕೈಗೊಂಡ ಕಾಮಗಾರಿಗಳು ಯಾವುವು; ಕಾಮಗಾರಿಗಳಲ್ಲಿ ಪೂರ್ಣಗೊಂಡ, ಪ್ರಗತಿಯಲ್ಲಿರುವ ಮತ್ತು ಪ್ರಾರಂಭಕ್ಕೆ ಬಾಕಿ ಇರುವ ಕಾಮಗಾರಿಗಳು ಯಾವುವು (ವರ್ಷವಾರು ಕಾಮಗಾರಿವಾರು ವಿವರ ನೀಡುವುದು) ;

(ಈ) ಈ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಪ್ರವಾಸೋದ್ಯಮದಿಂದ ಸಂಗ್ರಹಿಸಲಾದ ಆದಾಯವೆಷ್ಟು (ವರ್ಷವಾರು ಜಿಲ್ಲಾವಾರು ವಿವರ ನೀಡುವುದು) ?

## ಮದ್ಯ ಮಾರಾಟ ಮಳಿಗೆಗಳಿಗೆ ಪರವಾನಿಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೩೪ (೨೦೬೪) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇಲಾಖಾ ವತಿಯಿಂದ ಮದ್ಯ ಮಾರಾಟ ಮಳಿಗೆಗಳಿಗೆ ಪರವಾನಿಗೆ ನೀಡುವ ಸಮಯದಲ್ಲಿ ನಿಷೇಧಿತ ಪ್ರದೇಶಗಳಾದ

ಅಂಗನವಾಡಿ, ಧಾರ್ಮಿಕ ಕೇಂದ್ರಗಳು, ಶೈಕ್ಷಣಿಕ ಸಂಸ್ಥೆಗಳು ಇತ್ಯಾದಿ ಸೂಕ್ಷ್ಮ ಪ್ರದೇಶಗಳನ್ನು ಹೊರತುಪಡಿಸಿ ಸ್ಥಳ ಆಯ್ಕೆ ಮಾಡುವ ಅಧಿಕಾರ ಯಾವ ಇಲಾಖೆಗೆ ಇದೆ ;

(ಆ) ಮದ್ಯ ಮಾರಾಟ ಮಳಿಗೆಗಳಿಗೆ ಸ್ಥಳ ಆಯ್ಕೆ ಮಾಡುವಲ್ಲಿ ಸ್ಥಳೀಯ ಸಂಸ್ಥೆಗಳ ಪಾತ್ರವೇನು ;

(ಇ) ಈ ಮಳಿಗೆಗಳಿಗೆ ಸ್ಥಳ ಆಯ್ಕೆ ಮಾಡುವ ಮತ್ತು ಪರವಾನಿಗೆ ನೀಡುವ ಬಗ್ಗೆ ಸರ್ಕಾರವು ಸ್ಪಷ್ಟ ನಿಯಮಾವಳಿಗಳನ್ನು ರೂಪಿಸಿದೆಯೇ ಇಲ್ಲವಾದಲ್ಲಿ ಕಾರಣವೇನು ?

## ಮೂಲಭೂತ ಸೌಕರ್ಯ ವಂಚಿತ ಸರ್ಕಾರಿ ಮತ್ತು ಖಾಸಗಿ ಪ್ರೌಢ ಶಾಲೆಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೬೩೫ (೨೦೬೧) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳಲ್ಲಿ ಸರ್ಕಾರಿ ಮತ್ತು ಖಾಸಗಿ ಪ್ರೌಢ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳಾದ ಬಾಲಕ/ಬಾಲಕಿಯರ ಶೌಚಾಲಯ, ವಿದ್ಯುತ್ ಸಂಪರ್ಕ. ಆಟದ ಮೈದಾನ, ರ್‍ಯಾಂಪ್ಸ್, ಆವರಣಗೋಡೆ ಕುಡಿಯುವ ನೀರು, ಗ್ರಂಥಾಲಯ ಸೌಲಭ್ಯವಿಲ್ಲದ ಶಾಲೆಗಳೆಷ್ಟು; ಅವು ಯಾವುವು (ಸರ್ಕಾರಿ ಮತ್ತು ಖಾಸಗಿ ಪ್ರೌಢ ಶಾಲೆವಾರು ಪ್ರತ್ಯೇಕ ವಿವರ ನೀಡುವುದು) ;

(ಆ) ಈ ಎರಡೂ ಜಿಲ್ಲೆಗಳಲ್ಲಿ ಸರ್ಕಾರಿ ಪ್ರೌಢ ಶಾಲೆಗಳಿಗೆ ಸ್ವಂತ ಕಟ್ಟಡವಿಲ್ಲದೆ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ

ಪ್ರೌಢ ಶಾಲೆಗಳೆಷ್ಟು ಮತ್ತು ಯಾವುವು (ಜಿಲ್ಲಾವಾರು ವಿವರ ನೀಡುವುದು) ;

(ಇ) ಸದರಿ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಸ್ತೂರಬಾ ಗಾಂಧಿ ಬಾಲಕ ವಿದ್ಯಾಲಯುಗಳೆಷ್ಟು; ಇದರ ಮಂಜೂರಾತಿಗೆ ಮಾನದಂಡಗಳೇನು ?

## ಗ್ರಾಮೀಣ ರಸ್ತೆಗಳ ನಿರ್ವಹಣೆ.

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :–**

೧೬೩೬ (೨೦೬೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮೀಣ ರಸ್ತೆಗಳ ನಿರ್ವಹಣಾ ಜವಾಬ್ದಾರಿಯನ್ನು ಪ್ರಸ್ತುತ ಇರುವ ಜಿಲ್ಲಾ ಪಂಚಾಯತ್‌ನಿಂದ ಹಿಂಪಡೆದು ಕೇಂದ್ರ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಗೆ ನೀಡುವ ಉದ್ದೇಶವನ್ನು ಸರ್ಕಾರವು ಹೊಂದಿದೆಯೇ; ಹೊಂದಿದ್ದಲ್ಲಿ, ನಿರ್ವಹಿಸಬೇಕಾದ ರಸ್ತೆಗಳನ್ನು ಆಯ್ಕೆ ಮಾಡುವ ವಿಧಾನಗಳು ಯಾವುವು ;

(ಆ) ದುರಸ್ತಿಗೊಳಿಸಬೇಕಾದ ಎಲ್ಲಾ ಗ್ರಾಮೀಣ ರಸ್ತೆಗಳನ್ನು ಕೇಂದ್ರ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯು ಆಯಾ ವರ್ಷದಲ್ಲಿ ನಿರ್ವಹಿಸುತ್ತಿದೆಯೇ; ಅಥವಾ ಅನುದಾನದ ಲಭ್ಯತೆಗೆ ಅನುಸಾರವಾಗಿ ರಸ್ತೆಗಳನ್ನು ಆಯ್ಕೆ ಮಾಡಿ ನಿರ್ವಹಿಸುತ್ತಿದೆಯೆ;

(ಇ) ಅನುದಾನದ ಲಭ್ಯತೆಗೆ ಅನುಗುಣವಾಗಿ ಕಾರ್ಯ ನಿರ್ವಹಿಸುವುದಾದಲ್ಲಿ ಉಳಿದ ರಸ್ತೆಗಳ ನಿರ್ವಹಣೆ ಜವಾಬ್ದಾರಿ ಯಾರಿಗೆ ನೀಡಲಾಗುವುದು ;

(ಈ) ಗ್ರಾಮೀಣ ರಸ್ತೆಗಳ ನಿರ್ವಹಣಾ ಜವಾಬ್ದಾರಿಯುನ್ನು ಪಂಚಾಯತ್‌ರಾಜ್ ಕಾಯ್ದೆಯನ್ವಯ ಸ್ಥಳೀಯ ಸಂಸ್ಥೆಗಳಿಗೆ ನೀಡಿದ್ದು, ಇದೀಗ ಜಾರಿಗೊಳಿಸುವ ಕ್ರಮದಿಂದ ಸ್ಥಳೀಯ ಸಂಸ್ಥೆಗಳ ಅಧಿಕಾರ ಮೊಟಕುಗೊಳಿಸಿದಂತಾಗುವುದಿಲ್ಲವೇ ?

## ಸಾರ್ವಜನಿಕ ಸ್ಥಳದಲ್ಲಿ ಕುಡಿಯುವ ನೀರಿನ ಬಾವಿ ನಿರ್ಮಾಣ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೩೭ (೨೦೬೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಖಾಸಗಿ ಸ್ಥಳದಲ್ಲಿ ಸಾರ್ವಜನಿಕ ಕುಡಿಯುವ ನೀರಿನ ತೆರೆದ ಬಾವಿಗಳನ್ನು ನಿರ್ಮಿಸುವಾಗ ಅನುಸರಿಸುವ ಮಾನದಂಡವೇನು ;

(ಆ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗದಿಂದ ನಿರ್ಮಿಸಲಾದ ಸಾರ್ವಜನಿಕ ತೆರೆದ ಬಾವಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಗ್ರಾಮ ಪಂಚಾಯತ್‌ವಾರು ವಿವರ ನೀಡುವುದು) ;

(ಇ) ಜಿಲ್ಲೆಯಲ್ಲಿ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗವು ಸಾರ್ವಜನಿಕ ತೆರೆದ ಬಾವಿ ನಿರ್ಮಿಸುವಾಗ ಖಾಸಗಿಯುವರೊಂದಿಗೆ ಶಾಮೀಲಾಗಿ ಖಾಸಗಿ ಸ್ಥಳದಲ್ಲಿ ಸಾರ್ವಜನಿಕ ತೆರೆದ ಬಾವಿ ನಿರ್ಮಿಸುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟವಾಗುವುದಲ್ಲದೆ ಸಾರ್ವಜನಿಕರಿಗೆ ಇದರ ಪ್ರಯೋಜನ ಸಿಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಹೈದರಾಬಾದ್ ಕರ್ನಾಟಕ ಪ್ರದೇಶದಲ್ಲಿ ವಾರ್ತಾ ಇಲಾಖಾ ಕಛೇರಿಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೩೮ (೨೦೫೬) ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಇರುವ ವಾರ್ತಾ ಇಲಾಖೆಯ ಕಛೇರಿಗಳು ಎಷ್ಟು ; ಆ ಕಛೇರಿಗಳಲ್ಲಿ ವಾರ್ತಾ ಅಧಿಕಾರಿಗಳು, ಉಪನಿರ್ದೇಶಕರು, ಸಹಾಯಕ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು (ವೃಂದವಾರು ಮಾಹಿತಿ ನೀಡುವುದು) ;

(ಆ) ಈ ಭಾಗದಲ್ಲಿ ಇರುವ ವಾರ್ತಾ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಈ ಖಾಲಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಗುಲ್ಬರ್ಗಾದಲ್ಲಿ ಕಳೆದ ೬ ವರ್ಷಗಳಿಂದ ಉಪನಿರ್ದೇಶಕರ ಹುದ್ದೆ ಖಾಲಿ ಇದ್ದರೂ ಏಕೆ ನೇಮಕಮಾಡಿರುವುದಿಲ್ಲ ;

(ಉ) ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಪ್ರಕಟಗೊಳ್ಳುತ್ತಿರುವ ಜಿಲ್ಲಾ ಹಾಗೂ ಪ್ರಾದೇಶಿಕ ಪತ್ರಿಕೆಗಳು ಎಷ್ಟು ;

(ಊ) ಸದರಿ ಪತ್ರಿಕೆಗಳಿಗೆ ಸರ್ಕಾರದಿಂದ ನೀಡುವ ಜಾಹಿರಾತಿನಲ್ಲಿ ತಾರತಮ್ಯವಾಗುತ್ತಿದೆಯೇ ;

(ಋ) ರಾಜ್ಯ ಸರ್ಕಾರದ ಒಂದು ವರ್ಷದ ಸಾಧನೆಯ ಜಾಹಿರಾತುಗಳು ಹೈದರಾಬಾದ್ ಕರ್ನಾಟಕ ಭಾಗದಲ್ಲಿ ಜಿಲ್ಲಾ ಹಾಗೂ ಪ್ರಾದೇಶಿಕ ಪತ್ರಿಕೆಗಳಿಗೆ ಎಷ್ಟು ಸಂಖ್ಯೆಯ ಹಾಗೂ ಎಷ್ಟು ಮೊತ್ತ ಬಿಡುಗಡೆ ಮಾಡಲಾಗಿದೆ ;

(ೠ) ಸರ್ಕಾರ ಪತ್ರಿಕೆಗಳಿಗೆ ಜಾಹಿರಾತು ನೀಡಲು ಜಾರಿಗೆ ತಂದಿರುವ ನೀತಿಯನ್ನು ಏಕೆ ಅನುಷ್ಠಾನಗೊಳಿಸಿರುವುದಿಲ್ಲ ?

## ಕಿಡ್ಸ್ ಸೆಂಟರ್‌ಗಳಿಂದ ಅನಧಿಕೃತ ಪೂರ್ವ ಪ್ರಾಥಮಿಕ ಶಾಲೆಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)** :-

೧೬೩೯ (೨೦೫೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಉತ್ತರ ವಲಯ-೩ರ ಮರ್ಫಿಟೌನ್ ಕ್ಲಸ್ಟರ್ ವ್ಯಾಪ್ತಿಯಲ್ಲಿ ಡೇ ಕೇರ್ ಸೆಂಟರ್ ಮತ್ತು ಕಿಡ್ಸ್ ಸೆಂಟರ್‌ಗಳು ಅನಧಿಕೃತವಾಗಿ ಪೂರ್ವ ಪ್ರಾಥಮಿಕ ಶಾಲೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಳ್ಳುವ ಕ್ರಮಗಳೇನು ಬರದಿದ್ದಲ್ಲಿ, ತಪಾಸಣೆ ನಡೆಸಲು ಸರ್ಕಾರ ಮುಂದಾಗುವುದೆ ;

(ಆ) ಬೆಂಗಳೂರು ಉತ್ತರ ವಲಯ-೩ರ ಮರ್ಫಿಟೌನ್ ಕ್ಲಸ್ಟರ್ ವ್ಯಾಪ್ತಿಯಲ್ಲಿ ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆಯಿಂದ ತಪ್ಪಿಸಿಕೊಳ್ಳಲು ಈ ಕಿಡ್ಸ್ ಸೆಂಟರ್‌ಗಳನ್ನು ತೆರೆದು ವಂಚಿಸುತ್ತಿರುವ ಕುರಿತು ಸರ್ಕಾರ ತೆಗೆದುಕೊಳ್ಳುವ ಕ್ರಮಗಳೇನು ;

(ಇ) ಸದರಿ ಮರ್ಫಿಟೌನ್ ಕ್ಲಸ್ಟರ್ ವ್ಯಾಪ್ತಿಯಲ್ಲಿ ೨೦೧೩-೧೪ರ ಸಾಲಿನಲ್ಲಿ ಅನಧಿಕೃತ ಶಾಲೆಗಳನ್ನು ಅಕ್ರಮವಾಗಿ ಅನುಮತಿ ನೀಡಿ ಸಕ್ರಮಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಳ್ಳುವ ಕ್ರಮಗಳೇನು ?

**ಬಹು ಗ್ರಾಮಗಳ ಕುಡಿಯುವ ನೀರಿನ ಯೋಜನೆ**

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೪೦ (೨೦೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಯಲ್ಲಿ ಬಹು ಗ್ರಾಮಗಳ ಕುಡಿಯುವ ನೀರಿನ ಯೋಜನೆ (Multi Villages drinking water scheme) ಸದ್ಯ ಯಾವ ಹಂತದಲ್ಲಿದೆ ;

(ಆ) ಸದರಿ ಯೋಜನೆಗೆ ಚಾಲನೆ ನೀಡಿದ್ದು ಯಾವಾಗ ;

(ಇ) ಯೋಜನೆಯ ಪ್ರಾರಂಭಿಕ ಹಂತದಲ್ಲಿ ಎಷ್ಟು ಮೊತ್ತದ ಅನುದಾನಕ್ಕೆ ಆಡಳಿತಾತ್ಮಕ ಅನುಮೋದನೆ ದೊರಕಿತ್ತು ; ಸದ್ಯ ಸದರಿ ಯೋಜನೆಗೆ ವ್ಯಯಿಸಲಾದ ಅನುದಾನ ಎಷ್ಟು (ವಿವರಗಳನ್ನು ನೀಡುವುದು) ;

(ಈ) ಜಿಲ್ಲೆಯ ಯಾವ ಯಾವ ಭಾಗದ ಎಷ್ಟು ಗ್ರಾಮಗಳು ಸದರಿ ಯೋಜನೆಯು ವ್ಯಾಪ್ತಿಯಲ್ಲಿ ಬರುತ್ತವೆ (ವಿವರಗಳನ್ನು ನೀಡುವುದು) ;

(ಉ) ಸದರಿ ಯೋಜನೆಯ ಅನುಷ್ಠಾನದಲ್ಲಿ ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು ; ಈ ಯೋಜನೆಯುನ್ನು ಯಾವಾಗ ಮುಕ್ತಾಯಗೊಳಿಸಲಾಗುವುದು ?

## ನಿರ್ಮಲ ಭಾರತ ಅಭಿಯಾನ ಯೋಜನೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) :-**

೧೬೪೧ (೨೦೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ನಿರ್ಮಲ ಭಾರತ ಅಭಿಯಾನ ಯೋಜನೆಯಡಿ ಕೊಪ್ಪಳ ಮತ್ತು ರಾಯಚೂರು ಜಿಲ್ಲೆಗೆ ಎಷ್ಟು ಅನುದಾನ ಸ್ವೀಕೃತವಾಗಿದೆ ;

(ಆ) ಇದರಲ್ಲಿ ಶಿಕ್ಷಣ ಇಲಾಖೆ ಸೇರಿದಂತೆ ಯಾವ ಇಲಾಖೆಗಳಿಗೆ ಎಷ್ಟು ಅನುದಾನ ಒದಗಿಸಲಾಗಿದೆ ; ಅನುದಾನವನ್ನು ಉಪಯೋಗಿಸಲಾದ ವಿವರಗಳನ್ನು ನೀಡುವುದು ;

(ಇ) ಐ.ಇ.ಸಿ. ಕಾರ್ಯಕ್ರಮವನ್ನು ಯಾವ ತಾಲ್ಲೂಕುಗಳಲ್ಲಿ ಹಮ್ಮಿಕೊಳ್ಳಲಾಗಿದೆ (ತಾಲ್ಲೂಕುವಾರು ವಿವರ ನೀಡುವುದು) ;

(ಈ) ಈ ಯೋಜನೆಯಲ್ಲಿ ಘನತ್ಯಾಜ್ಯ ವಸ್ತು ನಿರ್ವಹಣೆಗೆ ಎಷ್ಟು ವೆಚ್ಚ ಭರಿಸಲಾಗಿದೆ ; ಎಷ್ಟು ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ (ವಿವರಗಳನ್ನು ನೀಡುವುದು) ?

## ಖಾಲಿ ಇರುವ ಶಿಕ್ಷಕರ ಹಾಗೂ ಉಪನ್ಯಾಸಕರ ಹುದ್ದೆಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೬೪೨ (೨೦೪೫) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಶಿಕ್ಷಕರ/ಉಪನ್ಯಾಸಕರ ಹುದ್ದೆಗಳೆಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಹಲವು ವರ್ಷಗಳಿಂದ ಖಾಲಿ ಇರುವ ಈ ಹುದ್ದೆಗಳನ್ನು ಭರ್ತಿ ಮಾಡದೇ ಇರುವುದರಿಂದ ತೊಂದರೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಯಾವ ನಿಗದಿತ ಸಮಯದಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮವನ್ನು ಕೈಗೊಳ್ಳಲಾಗುವುದು ?

## ಕಾಲ್ಪನಿಕ ವೇತನ ಬಡ್ತಿ

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೬೪೩ (೨೦೪೪) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಶಾಲಾ–ಕಾಲೇಜುಗಳ ಶಿಕ್ಷಕರಿಗೆ ಹಾಗೂ ಉಪನ್ಯಾಸಕರಿಗೆ ಕಾಲ್ಪನಿಕ ವೇತನ ಬಡ್ತಿ ನೀಡುವಂತೆ ಮಾನ್ಯ

ಉಚ್ಚ ನ್ಯಾಯಾಲಯ ಹಾಗೂ ಸರ್ವೋಚ್ಚ ನ್ಯಾಯಾಲಯದ ಆದೇಶವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಕಾಲ್ಪನಿಕ ವೇತನ ಬಡ್ತಿ ನೀಡುವಲ್ಲಿ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣಗಳೇನು ?

**ಪಾಳಿ ಪದ್ಧತಿಯಲ್ಲಿ ನಡೆಯುತ್ತಿರುವ ಕಾಲೇಜುಗಳು**

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೪೪ (೨೦೪೩) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪಾಳಿ ಪದ್ಧತಿಯಲ್ಲಿ ನಡೆಯುತ್ತಿರುವ ಸರ್ಕಾರಿ ಪದವಿಪೂರ್ವ ಕಾಲೇಜುಗಳೆಷ್ಟು (ಜಿಲ್ಲಾವಾರು ವಿವರಗಳನ್ನು ನೀಡುವುದು) ;

(ಆ) ಸ್ವಂತ ಕಟ್ಟಡಗಳನ್ನು ಹೊಂದಿರುವ ಪದವಿಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ?

**ಸರ್ಕಾರಿ ವೇತನಾನುದಾನಕ್ಕೆ ಒಳಪಡಿಸಿರುವ ಶಾಲಾ-ಕಾಲೇಜುಗಳು**

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೬೪೫(೨೦೪೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಿಂದ ಸರ್ಕಾರಿ ವೇತವಾನುದಾನಕ್ಕೆ ಒಳಪಡಿಸಲಾಗಿರುವ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳು ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ವೇತನಾನುದಾನಕ್ಕೆ ಒಳಪಡಿಸಲು ಬಾಕಿ ಇರುವ ಪ್ರಸ್ತಾವನೆಗಳೆಷ್ಟು ;

(ಇ) ಬಾಕಿ ಇರಲು ಕಾರಣಗಳೇನು (ಮಾಹಿತಿ ನೀಡುವುದು) ?

## ಗ್ರಾಮ ಪಂಚಾಯತ್ ಹಮ್ಮಿಕೊಳ್ಳುವ ಯೋಜನೆಗಳು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೪೬ (೨೦೨೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯಿತಿಯಡಿ ಹಮ್ಮಿಕೊಳ್ಳುವ ಯೋಜನೆಗಳಾವುವು (ಸಂಪೂರ್ಣ ಮಾಹಿತಿ ಒದಗಿಸುವುದು) ;

(ಆ) ಹಾವೇರಿ ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಯಾವ ಯಾವ ಯೋಜನೆಗಳಡಿ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ (ತಾಲ್ಲೂಕು, ಗ್ರಾಮ ಪಂಚಾಯಿತಿವಾರು ಮಾಹಿತಿ ಒದಗಿಸುವುದು) ;

(ಇ) ಈ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನವೆಷ್ಟು; ಚಾಲ್ತಿಯಲ್ಲಿರುವ ಕಾಮಗಾರಿಗಳೆಷ್ಟು ;

(ಈ) ಗ್ರಾಮ ಪಂಚಾಯಿತಿಗಳ ಕೆಲವು ಕಾಮಗಾರಿಗಳಲ್ಲಿ ಅವ್ಯವಹಾರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಯಾವ ಗ್ರಾಮ ಪಂಚಾಯಿತಿಗಳಲ್ಲಿ ಯಾವ ಕಾಮಗಾರಿಗಳು ಅವ್ಯವಹಾರದಿಂದ ಕೂಡಿರುತ್ತವೆ ?

## ಹೊಸದಾಗಿ ನೀಡಲಾಗುವ ಸನ್ನದು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೬೪೭ (೯೮೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿರುದ್ಯೋಗಿ ಪದವೀಧರರಿಗೆ ಅಬಕಾರಿ ಇಲಾಖೆಯಿಂದ ಹೊಸದಾಗಿ ಸನ್ನದು (ಲೈಸೆನ್ಸ್) ನೀಡಲು ಸರ್ಕಾರ ಚಿಂತಿಸಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ದಿನಾಂಕದಿಂದ ನೀಡಲಾಗುವುದು ;

(ಇ) ಸನ್ನದುಗಳನ್ನು ನೀಡುವಲ್ಲಿ ಅನುಸರಿಸಲಾಗುವ ಮಾನದಂಡಗಳೇನು ?

## ಕುಡಿಯುವ ನೀರಿನ ಸಮಸ್ಯೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೬೪೮ (೯೮೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ಕುಡಿಯುವ ನೀರನ ಬವಣೆ ನೀಗಿಸಲು ಸರ್ಕಾರ ಹಮ್ಮಿಕೊಂಡ ಯೋಜನೆಗಳಾವುವು ;

(ಆ) ಕಳೆದ ಒಂದು ವರ್ಷದಲ್ಲಿ ಈ ಯೋಜನೆಗಳಿಗಾಗಿ ಎಷ್ಟು ಹಣವನ್ನು ವ್ಯಯಿಸಲಾಗಿದೆ (ಜಿಲ್ಲಾವಾರು ಮಾಹಿತಿ ನೀಡುವುದು) ?

## ಗುಲ್ಬರ್ಗಾ ಜಿಲ್ಲೆಯ ಕುಡಿಯುವ ನೀರಿಗೆ ಸಂಬಂಧಿಸಿದಂತೆ

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೧೬೪೯ (೧೯೮೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಕುಡಿಯುವ ನೀರಿನ ಯೋಜನೆಗಾಗಿ ಗುಲ್ಬರ್ಗಾ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ (ತಾಲ್ಲೂಕುವಾರು ವಿವರ ಒದಗಿಸುವುದು) ;

(ಆ) ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಹೆಚ್ಚಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಕೈಗೊಂಡಿರುವ ಕ್ರಮಗಳೇನು ;

(ಇ) ಸದರಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ತೊಂದರೆಯನ್ನು ನೀಗಿಸುವಲ್ಲಿ ಸರ್ಕಾರದ ಮುಂದೆ ಯಾವುದಾದರೂ ಹೊಸ ಯೋಜನೆಗಳು ಇವೆಯೇ ;

(ಈ) ಗುಲ್ಬರ್ಗಾ ನಗರದಲ್ಲಿ ೨೪ ಗಂಟೆಗಳ ಕುಡಿಯುವ ನೀರನ್ನು ಪೂರೈಸಲಾಗುವುದೆಂದು ಸರ್ಕಾರದ ವತಿಯಿಂದ ಘೋಷಿಸಲಾಗಿತ್ತು ; ಆದರೆ ೨೪ ಗಂಟೆಗಳು ಕುಡಿಯುವ

ನೀರನ್ನು ಪೂರೈಸುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕೈಗೊಂಡಿರುವ ಕ್ರಮಗಳೇನು ; ೨೪ ಗಂಟೆಗಳ ಕುಡಿಯುವ ನೀರು ಸರಬರಾಜು ವಿಫಲಗೊಂಡಿರುವುದಕ್ಕೆ ಕಾರಣವೇನು ; ಅದನ್ನು ಪೂರೈಸಲು ಎಷ್ಟು ಸಮಯ ಬೇಕಾಗುತ್ತದೆ ?

## ಉರ್ದು ಶಾಲೆಗಳು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) :–**

೧೬೫೦ (೧೯೮೨) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಜಿಲ್ಲೆಯಲ್ಲಿರುವ ಉರ್ದು ಶಾಲೆಗಳ ತಾಲ್ಲೂಕುವಾರು ವಿವರ ಒದಗಿಸುವುದು ;

(ಆ) ಕಳೆದ ೨ ವರ್ಷಗಳಲ್ಲಿ ಗುಲ್ಬರ್ಗಾ ಜಿಲ್ಲೆಯಲ್ಲಿನ ಉರ್ದು ಶಾಲೆಗಳಿಗೆ ಎಷ್ಟು ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗಿದೆ ;

(ಇ) ಜಿಲ್ಲೆಯಲ್ಲಿನ ಉರ್ದು ಶಾಲೆಗಳಲ್ಲಿ ಕನ್ನಡ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕೈಗೊಂಡಿರುವ ಕ್ರಮಗಳೇನು ;

(ಈ) ಜಿಲ್ಲೆಯ ಎಲ್ಲಾ ಉರ್ದು ಶಾಲೆಗಳಲ್ಲಿ ಮಕ್ಕಳ ಸಂಖ್ಯೆಗನುಗುಣವಾಗಿ ಶಿಕ್ಷಕರನ್ನು ನೇಮಿಸಲಾಗಿದೆಯೇ ; ನೇಮಿಸಿದ್ದರೆ, ಎಷ್ಟು ಮಕ್ಕಳಿಗೆ ಒಟ್ಟು ಶಿಕ್ಷಕರನ್ನು ನೇಮಿಸಲಾಗಿದೆ ; ವಿದ್ಯಾರ್ಥಿಗಳ ಸಂಖ್ಯೆಗೆ ಶಿಕ್ಷಕರ ಸಂಖ್ಯೆ ಸರಿದೂಗಿಸಲು ಸಾಧ್ಯವಾಗದಿರುವುದಕ್ಕೆ ಸರ್ಕಾರದ ಮುಂದಿರುವ ಯೋಚನೆಯೇನು ; ಇದನ್ನು ಸರಿದೂಗಿಸಲು ಎಷ್ಟು ಸಮಯ ಬೇಕಾಗುತ್ತದೆ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು-59/ಕಾ.ಸೂ. 03392/1000 ಪ್ರತಿಗಳು/23-07-2014